ಸಂಪುಟ 01 । ಸಂಚಿಕೆ 133 ।ಬುಧವಾರ 01 ಏಪ್ರಿಲ್ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ದಾಸೋಹ ದಿನ**

ಕರ್ನಾಟಕ ಸರ್ಕಾರವು ಸಿದ್ದಗಂಗಾ ಮಠದ ತ್ರಿವಿಧ ದಾಸೋಹಿ, ನಡೆದಾಡುವ ದೇವರು ಎಂದೇ ಪ್ರಸಿದ್ಧರಾಗಿದ್ದ ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಅವರು ಲಿಂಗೈಕ್ಯರಾದ ದಿನವಾದ ಜನವರಿ 21 ಅನ್ನು ಪ್ರತಿವರ್ಷ 'ದಾಸೋಹ ದಿನ' (ಆಳಿಝಚಿ ಆಟಚಿ) ಎಂದು ಆಚರಿಸಲು ಘೋಷಿಸಿದೆ. ಸ್ವಾಮೀಜಿಯವರ ಶೈಕ್ಷಣಿಕ, ಸಾಮಾಜಿಕ ಮತ್ತು ದಾಸೋಹ ಸೇವೆಯನ್ನು ಸ್ಮರಿಸುವ ನಿಟ್ಟಿನಲ್ಲಿ ಈ ದಿನವನ್ನು ರಾಜ್ಯದಾದ್ಯಂತ ವಿಶೇಷವಾಗಿ ಆಚರಿಸಲಾಗುತ್ತದೆ.

**2) ಏಪ್ರಿಲ್ ಮೂರ್ಖರ ದಿನ**

ಏಪ್ರಿಲ್ ಮೂರ್ಖರ ದಿನವನ್ನು ಎಲ್ಲಾ ಮೂರ್ಖರ ದಿನ ಎಂದೂ ಕರೆಯಲಾಗುತ್ತದೆ ಮತ್ತು ಶತಮಾನಗಳಿಂದ ಆಚ-ರಿಸಲಾಗುತ್ತದೆ ಆದರೆ ಇದರ ಮೂಲವು ಅನಿಶ್ಚಿತವಾಗಿದೆ. ಕೆಲವು ಇತಿಹಾಸಕಾರರ ಪ್ರಕಾರ, ಇದನ್ನು ಮೊದಲು 1852 ರಲ್ಲಿ ಆಚರಿಸಲಾಯಿತು, ಫ್ರಾನ್ಸ್ ಜೂಲಿಯನ್ ಕ್ಯಾಲೆಂಡರ್‌ನಿಂದ ಗ್ರೆಗೋರಿಯನ್ ಕ್ಯಾಲೆಂಡರ್‌ಗೆ ಬದಲಾಯಿಸಿದಾಗ, ಮತ್ತು ಕೆಲವರು ಇದು ಋತುಗಳ ತಿರುವಿಗೆ ಸಂಬಂಧಿಸಿದೆ ಎಂದು ಹೇಳುತ್ತಾರೆ.

**3) ಒಡಿಶಾ ದಿನ**

ಉತ್ಕಲ ದಿವಸ್ ಎಂದೂ ಕರೆಯಲ್ಪಡುವ ಒಡಿಶಾ ದಿನವು ಏಪ್ರಿಲ್ 1, 1936 ರಂದು ಒಡಿಶಾ ರಾಜ್ಯ ರಚನೆಯ ದಿನವಾಗಿದೆ. ಈ ದಿನವು ಒಡಿಶಾದ ಶ್ರೀಮಂತ ಇತಿಹಾಸ, ಸಂಸ್ಕೃತಿ ಮತ್ತು ಕೊಡುಗೆಗಳನ್ನು ಆಚರಿಸುತ್ತದೆ ಮತ್ತು ಪ್ರತ್ಯೇಕ ರಾಜ್ಯವಾಗಿ ಗುರುತಿಸಲು ಕಾರಣವಾದ ಪ್ರಯತ್ನಗಳನ್ನು ಗೌರವಿಸುತ್ತದೆ.

**4) ಕುರುಡುತನ ತಡೆಗಟ್ಟುವಿಕೆ ಸಪ್ತಾಹ**

ಏಪ್ರಿಲ್ 1 ರಿಂದ ಏಪ್ರಿಲ್ 7 ರವರೆಗೆ ಕುರುಡುತನದ ಕಾರಣಗಳು ಮತ್ತು ಅವುಗಳನ್ನು ತಡೆಗಟ್ಟುವ ಮಾರ್ಗಗಳ ಬಗ್ಗೆ ಜಾಗೃತಿ ಮೂಡಿಸಲು ಆಚರಿಸಲಾಗುತ್ತದೆ

## ಸುಭಾಷಿತ

ಒಂದು ಅಗುಳು ಅನ್ನದ ಹಿಂದೆ ಕೂಡ
ಹಲವರ ಪರಿಶ್ರಮ ಇರುತ್ತದೆ. ಆದ್ದರಿಂದ,
ಆಹಾರ ಸೇವಿಸುವಾಗ ವ್ಯರ್ಥ ಮಾಡುವುದು
ಶ್ರೇಯಸ್ಕರವಲ್ಲ.

ಶ್ರೀ ಶಿವಕುಮಾರ ಸ್ವಾಮೀಜಿ

# ದ್ವಿತೀಯ ಪಿಯುಸಿ ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2ರ ವೇಳಾಪಟ್ಟಿ ಪ್ರಕಟ




**ಬೆಂಗಳೂರು: ಕರ್ನಾಟಕ ಶಾಲಾ ಪರೀಕ್ಷೆ ಮೌಲ್ಯ ನಿರ್ಣಯ ಮಂಡಳಿ–2026ರ ದ್ವಿತೀಯ ಪಿಯುಸಿ ಪರೀಕ್ಷೆ–2 ರ ಪರಿಷ್ಕೃತ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಏ.25 ರಿಂದ ಮೇ.8 ರವರೆಗೆ ದ್ವಿತೀಯ ಪಿಯುಸಿ ಪರೀಕ್ಷೆ–2 ನಡೆಯಲಿದೆ. ಏ. 25 ರಂದು ಕನ್ನಡ, ಅರೇಬಿಕ್, ಏ.27 ರಂದು ಐಚ್ಚಿಕ ಕನ್ನಡ, ತರ್ಕಶಾಸ್ತ್ರ, ಲೆಕ್ಕಶಾಸ್ತ್ರ, ರಸಾಯನಶಾಸ್ತ್ರ, ಏ.28 ರಂದು ಇಂಗ್ಲಿಷ್, ಏ.29 ರಂದು ವ್ಯವಹಾರ ಅಧ್ಯಯನ, ಭೌತಶಾಸ್ತ್ರ, ಶಿಕ್ಷಣ ಶಾಸ್ತ್ರ, ಏ.30 ರಂದು ಅರ್ಥಶಾಸ್ತ್ರ, ಜೀವಶಾಸ್ತ್ರ ಪರೀಕ್ಷೆಗಳು ನಡೆಯಲಿವೆ.**

ಮೇ 2 ರಂದು ಇತಿಹಾಸ, ಗಣಿತ, ಗೃಹವಿಜ್ಞಾನ, ಮೇ 4 ರಂದು ರಾಜ್ಯಶಾಸ್ತ್ರ, ವಿದ್ಯುನಾನಶಾಸ್ತ್ರ, ಗಣಕವಿಜ್ಞಾನ, ಮೇ 5 ರಂದು ಹಿಂದಿ, ಮೇ 6 ರಂದು ಸಮಾಜಶಾಸ್ತ್ರ, ಸಂಖ್ಯಾಶಾಸ್ತ್ರ, ಮೇ 7 ರಂದು ಭೂಗೋಳ ಶಾಸ್ತ್ರ, ಮನಃಶಾಸ್ತ್ರ, ಭೂಗರ್ಭ ಶಾಸ್ತ್ರ, ಮೂಲಗಣಿತ, ಮೇ 8 ರಂದು ತಮಿಳು, ತೆಲುಗು, ಮಲಯಾಳಂ, ಮರಾಠಿ, ಉರ್ದು, ಸಂಸ್ಕೃತ, ಫ್ರೆಂಚ್ ಹಾಗೂ ಹಿಂದೂಸ್ತಾನಿ ಸಂಗೀತ, ಎಲೆಕ್ಟ್ರಾನಿಕ್ ಮತ್ತು ಯಂತ್ರಾಂಶ, ಉಡುಪುಗಳ ತಯಾರಿಕೆ ಮತ್ತು ಗೃಹೋಪಯೋಗಿ ವಸ್ತುಗಳು, ಮಾಹಿತಿ ತಂತ್ರಜ್ಞಾನ, ರೀಟೈಲ್, ಆಟೋಮೊಬೈಲ್, ಬ್ಯೂಟಿ ಅಂಡ್ ವೆಲ್‌ನೆಸ್ ಪರೀಕ್ಷೆಗಳನ್ನು ನಡೆಸಲಾಗುತ್ತದೆ ಎಂದು ಮಂಡಳಿ ಪ್ರಕಟಣೆ ತಿಳಿಸಿದೆ.

ಮೇ 18 ರಿಂದ ಎಸ್–ಎಸ್‌ಎಲ್‌ಸಿ ಪರೀಕ್ಷೆ–2 : ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ಪ್ರಕಟಿತ ವೇಳಾಪಟ್ಟಿ ಪ್ರಕಾರ, ಮೇ 18 ರಿಂದ ಮೇ 25 ರವರೆಗೆ ನಡೆಯಲಿದೆ. ಮೇ 18 ರಂದು ಪ್ರಥಮ ಭಾಷೆಯಾದ ಕನ್ನಡ, ತೆಲುಗು, ಹಿಂದಿ, ಮರಾಠಿ, ತಮಿಳು, ಇಂಗ್ಲಿಷ್, ಇಂಗ್ಲಿಷ್ (ಎನ್‌ಸಿಇಆರ್‌ಟಿ), ಸಂಸ್ಕೃತ ಪರೀಕ್ಷೆಗಳು ನಡೆಯಲಿವೆ. ಮೇ 19 ರಂದು ವಿಜ್ಞಾನ, ರಾಜ್ಯಶಾಸ್ತ್ರ, ಹಿಂದೂಸ್ತಾನಿ ಸಂಗೀತ, ಕರ್ನಾಟಕ ಸಂಗೀತ, ಮೇ 20 ರಂದು ದ್ವಿತೀಯ ಭಾಷೆಗಳಾದ ಇಂಗ್ಲಿಷ್, ಕನ್ನಡ, ಮೇ 21 ರಂದು ಗಣಿತ, ಸಮಾಜಶಾಸ್ತ್ರ ಪರೀಕ್ಷೆಗಳನ್ನು ನಡೆಸಲಾಗುತ್ತದೆ.

ಮೇ 22 ರಂದು ತೃತೀಯ ಭಾಷೆಯ ವಿಷಯಗಳಾದ ಹಿಂದಿ(–ಎನ್‌ಸಿಇಆರ್‌ಟಿ), ಹಿಂದಿ, ಕನ್ನಡ, ಇಂಗ್ಲಿಷ್, ಅರೆಬಿಕ್, ಉರ್ದು, ಸಂಸ್ಕೃತ, ಕೊಂಕಣಿ, ತುಳು, ಮರಾಠಿ ಜೊತೆಗೆ ಮಾಹಿತಿ ತಂತ್ರಜ್ಞಾನ, ರೀಟೈಲ್, ಆಟೋಬೊಮೈಲ್, ಬ್ಯೂಟಿ ಅಂಡ್ ವೆಲ್‌ನೆಸ್, ಅಪರೆಲ್ ಮೇಡ್ ಅಪ್‌ಸ ಮತ್ತು ಹೋಂ ಫರ್ನಿಷಿಂಗ್, ಎಲೆಕ್ಟ್ರಾನಿಕ್‌ಸ ಮತ್ತು ಹಾರ್ಡ್‌ವೇರ್ ಪರೀಕ್ಷೆಗಳ ವೇಳಾಪಟ್ಟಿ ಪ್ರಕಟಿಸಲಾಗಿದೆ. ಮೇ 23 ರಂದು ಸಮಾಜವಿಜ್ಞಾನ, ಮೇ 25 ರಂದು ಎಲಿಮೆಂಟ್?ಸ ಆಫ್ ಎಲೆಕ್ಟ್ರಾನಿಕ್?ಸ ಇಂಜಿನಿಯರಿಂಗ್, ಎಲಿಮೆಂಟ್?ಸ ಆಫ್ ಮೆಕ್ಯಾನಿಕಲ್ ಇಂಜಿನಿಯರಿಂಗ್, ಎಲಿಮೆಂಟ್‌ಸ ಆಫ್ ಎಲೆಕ್ಟ್ರಿಕಲ್ ಇಂಜಿನಿಯರಿಂಗ್, ಪ್ರೋಗ್ರಾಮಿಂಗ್ ಇನ್ ಎಎನ್‌ಎಸ್‌ಐಸಿ, ಅರ್ಥಶಾಸ್ತ್ರ ಪರೀಕ್ಷೆಗಳನ್ನು ನಡೆಸಲಾಗುತ್ತದೆ.

# ಏ.5 ಜಗಜೀವನರಾಂ ಜಯಂತಿ ಆಚರಣೆ



**ನೈಜ್ಯ ದೆಸೆ ನ್ಯೂಸ್**

**ಮಸ್ಕಿ: ಪಟ್ಟಣದ ತಹಸೀಲ್ದಾರ್ ಕಾರ್ಯಾಲಯದ ಸಭಾಂಗಣದಲ್ಲಿ ಮಂಗಳವಾರ ತಹಸೀಲ್ದಾರ್ ಮಂಜುನಾಥ ಭೋಗಾವತಿ ಅಧ್ಯಕ್ಷತೆಯಲ್ಲಿ ಜಗಜೀವನರಾಂ ಜಯಂತಿ ಆಚರಣೆ ಹಿನ್ನಲೆಯಲ್ಲಿ ಪೂರ್ವಭಾವಿ ಸಭೆ ಜರುಗಿತು. ಸಭೆಯಲ್ಲಿ ತಹಸಿಲ್ದಾರ್ ಮಂಜುನಾಥ್ ಭೋಗಾವತಿ ಮಾತನಾಡಿ ಕಳೆದ ವರ್ಷದಂತೆ ಈ ವರ್ಷವೂ ಸಹ ಎಲ್ಲರ ಅಭಿಪ್ರಾಯವನ್ನು ಪಡೆದು ಜಯಂತಿಯನ್ನು ಆಚರಿಸಲು ತೀರ್ಮಾನಿಸೋಣ.**

ಏಪ್ರೀಲ್ 14 ರಂದು ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ಮತ್ತು ಹಸಿರು ಕ್ರಾಂತಿ ಹರಿಕಾರ ಜಗಜೀವನ್‌ರಾಂ ಅವರ ಜಯಂತಿಯನ್ನು ತಾಲೂಕಾಡಳಿತದಿಂದ ಅದ್ದೂರಿಯಾಗಿ ಆಚರಿಸಲು ಏಪ್ರಿಲ್ 6 ರಂದು ಮತ್ತೊಮ್ಮೆ ಸಭೆ ಕರೆದು ಎಲ್ಲರೊಂದಿಗೆ ಚರ್ಚಿಸೋಣ ಎಂದರು. ಏ. 5ರಂದು ಡಾ. ಬಾಬು ಜಗಜೀವನರಾಂ ಜಯಂತಿಯನ್ನು ಸರ್ಕಾರದ ನಿಯಮದಂತೆ ಆಚರಣೆ ಮಾಡಲಾಗುವುದು.

ಈ ಸಂದರ್ಭದಲ್ಲಿ ವಿವಿಧ ಸಂಘಟನೆಗಳು ಮುಖಂಡರು ಎರಡು ಜಯಂತಿಗಳನ್ನು ಒಟ್ಟಿಗೆ ಆಚರಣೆ ಮಾಡುವಂತೆ ಒತ್ತಾಯಿಸಿದರು.

ನಂತರ ತಹಸೀಲ್ದಾರ್ ಮಂಜುನಾಥ ಭೋಗಾವತಿ ಮಾತನಾಡಿ ಏ. 5 ರಂದು ಡಾ.ಬಾಬು ಜಗಜೀವನರಾಂ ಅವರ ಜಯಂತಿ ಸರಳವಾಗಿ ಆಚರಿಸಿ ಮತ್ತೊಮ್ಮೆ ಎಲ್ಲರ ಅಭಿಪ್ರಾಯ ಪಡೆದು ಅದ್ದೂರಿಯಾಗಿ ಆಚರಿಸುವ ಕುರಿತು ತೀರ್ಮಾನಿಸೋಣ ಎಂದರು. ಈ ಸಂದರ್ಭದಲ್ಲಿ ಲಿಂಗಸುಗೂರು ಸಮಾಜ ಕಲ್ಯಾಣ ಇಲಾಖೆ ತಾಲೂಕಾಧಿಕಾರಿ ರವೀಂದ್ರ ಉಪ್ಪಾರ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಅಮರೇಶ ಯಾದವ, ದಲಿತ ಮುಖಂಡರಾದ ಸಿ.ದಾನಪ್ಪ ನಿಲೋಗಲ್, ದೊಡ್ಡಪ್ಪ ಮುರಾರಿ ನಾಗರತ್ನ ಕಟ್ಟಿಮನಿ, ಕಾಸಿಮಪ್ಪ ಮುರಾರಿ, ದುರ್ಗಾರಾಜ ವಟಗಲ್, ಮಲ್ಲಪ್ಪ ಗೋನಾಳ್, ಸಿದ್ದು ಮುರಾರಿ, ಕಿರಣ್ ಮುರಾರಿ, ಮಲ್ಲಿಕ್ ಮುರಾರಿ, ಪ್ರಶಾಂತ ದಾನಪ್ಪ, ಬಸವರಾಜ್ ಕೊಠರಿ, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ತಹಸೀಲ್ ಕಛೇರಿ ಸಿಬ್ಬಂದಿಗಳಿದ್ದರು.

## ಏ.3 ರಂದು ನೇತಾಜಿ ಶಿಕ್ಷಣ ಸಂಸ್ಥೆಯಲ್ಲಿ ಪ್ರತಿಭಾ ಪ್ರವೇಶ ಪರೀಕ್ಷೆ: ಕೆ.ವಿಜಯಲಕ್ಷ್ಮೀ




**ನೈಜ್ಯ ದೆಸೆ ನ್ಯೂಸ್**

**ಮಾನ್ವಿ: ಪಟ್ಟಣದ ನೇತಾಜಿ ಶಿಕ್ಷಣ ಸಂಸ್ಥೆಯ ಪಿ.ಯು.ಕಾಲೇಜಿನಲ್ಲಿ 2026–27ನೇ ಸಾಲಿಗೆ ವಿಜ್ಞಾನ ವಿಭಾಗದ ಪ್ರಥಮ ವರ್ಷದ ಉಚಿತ ಮತ್ತು ಶುಲ್ಕ ರಿಯಾಯಿತಿ ಪ್ರವೇಶಕ್ಕಾಗಿ ಏ.3 ರಂದು ಬೆಳಿಗ್ಗೆ 10:30ಕ್ಕೆ ಪ್ರತಿಭಾನ್ವೇಶಣೆ ಪ್ರವೇಶ ಪರೀಕ್ಷೆ ಹಮ್ಮಿಕೊಳ್ಳಲಾಗಿದ್ದು ಪ್ರಸ್ತುತ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ರಾಯಚೂರು ಜಿಲ್ಲೆಯ ಎಲ್ಲಾ ತಾಲೂಕಿನ ವಿದ್ಯಾರ್ಥಿಗಳು ಕೂಡ ಪರೀಕ್ಷೆಯನ್ನು ಬರೆಯಬಹುದಾಗಿದೆ.**

ಪ್ರಥಮ ಬಹುಮಾನ ಲ್ಯಾಪ್‌ಟಾಪ್, ದ್ವಿತೀಯ ಬಹುಮಾನ ಸ್ಮಾರ್ಟ್ ಟ್ಯಾಬ್ ಇತರೆ ನಗದು ಬಹುಮಾನಗಳಿರುತ್ತವೆ ಹಾಗೂ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ನಮ್ಮ ಕಾಲೇಜಿನ ಪ್ರವೇಶ ಶುಲ್ಕದಲ್ಲಿ ಗಣನೀಯ ರಿಯಾಯಿತಿ ಹಾಗೂ 5 ಜನ ಟಾಪರ್ಸ್‌ಗ ಉಚಿತ ಪ್ರವೇಶ ನೀಡಲಾಗುತ್ತದೆ. ಕನ್ನಡ ಮತ್ತು ಆಂಗ್ಲ ಮಾಧ್ಯಮದಲ್ಲಿ ಪರೀಕ್ಷೆ ಬರೆಯಬಹುದು. ಶಾಲಾ ಗುರುತಿನ ಚೀಟಿ ಮತ್ತು 10ನೇ ತರಗತಿಯ ಹಾಲ್ ಟಿಕೆಟ್ ಕಡ್ಡಾಯವಾಗಿ ತರಬೇಕು. ಜಿಲ್ಲೆಯ ಪ್ರತಿಭಾವಂತ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಹೆಚ್ಚಿನ ಮಾಹಿತಿಗಾಗಿ 9880706628 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಸಂಸ್ಥೆಯ ಕಾರ್ಯದರ್ಶಿ ಕೆ.ವಿ–ಜಯಲಕ್ಷ್ಮೀ ಪ್ರಕಟಣೆಯಲ್ಲಿ ಕೋರಿದ್ದಾರೆ.

## 71 ದಿನದಲ್ಲಿ 1,079 ಪ್ರಕರಣ ವಿಲೇವಾರಿ, 2 ಲಕ್ಷ 28 ಸಾವಿರ ದಂಡ, 34 ಸಾವಿರ ಪರಿಹಾರ: ಬಿ.ವೆಂಕಟ ಸಿಂಗ್

**ನೈಜ್ಯ ದೆಸೆ ನ್ಯೂಸ್**



**ರಾಯಚೂರು: ಕರ್ನಾಟಕ ಮಾಹಿತಿ ಆಯೋಗ ಕಲಬುರಗಿ ಪೀಠದಲ್ಲಿ ಕಳೆದ ಐದು ತಿಂಗಳಲ್ಲಿ 71 ದಿನ ಕಲಾಪ ನಡೆಸಿ 1,079 ಪ್ರಕರಣಗಳು ವಿಲೇವಾರಿ ಮಾಡಿದೆ ಎಂದು ಕರ್ನಾಟಕ ಮಾಹಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಶ್ರೀ ಬಿ.ವೆಂಕಟ ಸಿಂಗ್ ತಿಳಿಸಿದ್ದಾರೆ.**

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, 24ನೇಯ ನವಂಬರ್–2025 ರಿಂದ ಮಾರ್ಚ ಅಂತ್ಯಕ್ಕೆ 2,520 ಪ್ರಕರಣಗಳು ವಿಚಾರಣೆಗೆ ಕೈಗೆತ್ತಿಕೊಂಡು 1,079 ಪ್ರಕರಣಗಳು ವಿಲೇವಾರಿ ಮಾಡಿರುವುದಾಗಿ ತಿಳಿಸಿದ್ದಾರೆ. ಅರ್ಜಿದಾರರಿಗೆ ಮಾಹಿತಿ ನೀಡಲು ಕಾಲ ಹರಣ ಮಾಡಿ ಸಮಯ ಮತ್ತು ಆರ್ಥಿಕ ನಷ್ಟ ಉಂಟು ಮಾಡಿದ ಕಾರಣ ನೊಂದ ಅರ್ಜಿದಾರರಿಗೆ 34 ಸಾವಿರ ಪರಿಹಾರ ನೀಡಲು ಆದೇಶ ಮಾಡಲಾಗಿದೆ ಎಂದು ಹೇಳಿದ್ದಾರೆ.

ವಿಶೇಷವಾಗಿ 71 ದಿನದಲ್ಲಿ ಕಳೆದ ಒಂದು ದಶಕದಿಂದ ವಿಲೇವಾರಿಗೆ ಬಾಕಿ ಇದ್ದ ಹಳೇ ಪ್ರಕರಣಗಳನ್ನು ಆದ್ಯತೆ ಮೇಲೆ ಎಲೇ ಮಾಡಿರುವುದಾಗಿ ತಿಳಿಸಿರುವ ಅವರು ಬರುವ ದಿನಗಳಲ್ಲಿ ಹೊಸ ಪ್ರಕರಣಗಳು ಕೈಗೆತ್ತಿಕೊಂಡು ವಿಚಾರಣೆ ಶೀಘ್ರವಾಗಿ ಮುಗಿಸಿ ಅರ್ಜಿದಾರರಿಗೆ ಮಾಹಿತಿ ಕೊಡಿಸಲು ಕ್ರಮ ವಹಿಸುವುದಾಗಿ ತಿಳಿಸಿದ್ದಾರೆ.

# ಜಾಲಹಳ್ಳಿ ಪಕ್ಷಾತೀತ ಪ್ರಗತಿಪರ ರೈತರ ಒಕ್ಕೂಟದಿಂದ ಭರ್ಜರಿ ವಿಜಯೋತ್ಸವ

**ನೈಜ್ಯ ದೆಸೆ ನ್ಯೂಸ್**



**ದೇವದುರ್ಗ: ತಾಲೂಕಿನ ಜಾಲಹಳ್ಳಿ ಗ್ರಾಮದಲ್ಲಿ ದಿನಾಂಕ 29–03–2026 ರಂದು (ರವಿವಾರ) ನಡೆದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರ ಚುನಾವಣೆಯಲ್ಲಿ ಪಕ್ಷಾತೀತ ಪ್ರಗತಿಪರ ರೈತರ ಒಕ್ಕೂಟ ಭರ್ಜರಿ ಜಯ ಸಾಧಿಸಿದ ಹಿನ್ನೆಲೆಯಲ್ಲಿ ಇಂದು ಗ್ರಾಮದಲ್ಲಿ ವಿಜೃಂಭಣೆಯ ವಿಜಯೋತ್ಸವವನ್ನು ಆಚರಿಸಲಾಯಿತು.**

ಅಂಬೇಡ್ಕರ್ ವೃತ್ತದಲ್ಲಿ ಮಾಲಾರ್ಪಣೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದ್ದು, ನಂತರ ಬಾಜಾ–ಭಜಂತ್ರಿಗಳೊಂದಿಗೆ ಮೆರವಣಿಗೆ ನಡೆಸಲಾಯಿತು. ಬಳಿಕ ಬಾಬು ಜಗಜೀವನ್ ರಾಮ್ ವೃತ್ತ ಹಾಗೂ ಭಗೀರಥ ವೃತ್ತಗಳಲ್ಲಿ ಮಾಲಾರ್ಪಣೆ ಮಾಡಲಾಯಿತು. ಮುಂದಾಗಿ ಈಶ್ವರ ದೇವಸ್ಥಾನ ಹಾಗೂ ಶ್ರೀ ಲಕ್ಷ್ಮೀ ರಂಗನಾಥ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು. ಜೊತೆಗೆ ಮೊಹರಂ ಅಲೈದೇವರ ಮಸೀದಿಯಲ್ಲಿ ಫಾತಿಹ ನೆರವೇರಿಸಲಾಯಿತು. ಧಾರ್ಮಿಕ ಸೌಹಾರ್ದತೆಯ ಸಂಕೇತವಾಗಿ ಎಲ್ಲ ಅಭ್ಯರ್ಥಿಗಳು ಹಾಗೂ ಮುಖಂಡರು ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ರೈತರ ಒಕ್ಕೂಟದ ಮುಖಂಡರಾದ ಚಂದಪ್ಪ ಬುದ್ದಿನ್ನಿ ಅವರು ಮಾತನಾಡಿ, "ನಮ್ಮ ಎಲ್ಲಾ ಸದಸ್ಯರು ರೈತರ ಪರವಾಗಿ ಕೆಲಸ ಮಾಡಿ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಉತ್ತಮ ಹೆಸರು ತರುತ್ತಾರೆ" ಎಂದು ವಿಶ್ವಾಸ ವ್ಯಕ್ತಪಡಿಸಿದರು. ಇದೇ ಸಂದರ್ಭದಲ್ಲಿ ಮುಖಂಡರಾದ ವೀರಣ್ಣ ಬಳೆ ಸಾಹುಕಾರ್ ಮಾತನಾಡಿ, "12 ಸ್ಥಾನಗಳಲ್ಲಿ 10 ಸ್ಥಾನಗಳನ್ನು ಗೆಲ್ಲಲು ರೈತರು ತೋರಿದ ಅಪಾರ ಬೆಂಬಲಕ್ಕೆ ನಾವು ಕೃತಜ್ಞರು" ಎಂದು ಹೇಳಿದರು. ಜೊತೆಗೆ ಈ ಗೆಲುವು ಎಲ್ಲ ಅಭ್ಯರ್ಥಿಗಳಿಗೆ ಹೆಚ್ಚಿದ ಜವಾಬ್ದಾರಿಯನ್ನು ನೀಡಿದೆ ಎಂದು ಅಭಿಪ್ರಾಯಪಟ್ಟರು.

ಗೆಲುವು ಸಾಧಿಸಿದ ಅಭ್ಯರ್ಥಿಗಳು: ಖುರಸಿದ್ ಪಟೇಲ್, ಗಿರೀಶ್ ಮಾಲಿಪಾಟೀಲ್, ನವೀನ್ ಪಾಟೀಲ್, ಈಶಣ್ಣ ಕಾಟಮಳ್ಳಿ, ಗೋವಿಂದಪ್ಪ ಹಲಗೇರಿ, ವೆಂಕೂಬ ಪೂಜಾರಿ, ಅಮರೆಗೌಡ ಪೊಲೀಸ್ ಪಾಟೀಲ್, ಶ್ರೀಮತಿ ಶಾಂತಮ್ಮ ಜಂಬಲದಿನ್ನಿ, ಶ್ರೀಮತಿ ಸರಸ್ವತಿ ನಾಡಗೌಡ, ವೆಂಕೋಬ ಯರಕಮಟ್ಟಿ ವಿಜಯೋತ್ಸವದಲ್ಲಿ ಭಾಗಿಯಾಗಿದ್ದರು.

ವಿಜಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿದವರು: ವೀರಣ್ಣ ಬಳೆ ಸಾಹುಕಾರ್, ಅಮರೇಶ್ ಪಾಟೀಲ್, ಶಿವು ಪಾಣಿ ಸಾಹುಕಾರ್, ರಾಮನಗೌಡ ಕರಡಿಗುಡ್ಡ, ಕೊಪರೇಶ್ ರಾವ್ ದೇಸಾಯಿ, ಶ್ರೀಧರ್ ದೇಸಾಯಿ, ಶಂಕರ್ ಗೌಡ ಮಾಲಿಪಾಟೀಲ್, ಚೆನ್ನಮ್ಮಮಠ ತಾತ, ರಂಗನಾಥ ಮಾಕಾಶಿ, ಚಂದಪ್ಪ ಬುದ್ದಿನ್ನಿ, ಗೌಡಪ್ಪ ವಡ್ಡರ್, ರಮೇಶ್ ಆನ್ವರಿ, ಗಂಗಪ್ಪ ತಗ್ಗಳ್ಳಿ, ಆನಂದ್ ಪಾಟೀಲ್, ಭೀಮಣ್ಣ ಅಂಜಳ, ಶಿವಲಿಂಗಪ್ಪ ಗೆಜ್ಜೆಬಾವಿ, ಲಕ್ಕಪ್ಪ ಚಿಂಚೋಡಿ, ರಂಗಪ್ಪ ಬಂಡಿ, ವೆಂಕುಬ ತೋಟದ, ಯಮನೂರಪ್ಪ ಬೊಮ್ಮನಹಳ್ಳಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಗ್ರಾಮ ಪಂಚಾಯತ್ ಉಪಾಧ್ಯಕ್ಷ ವೀರೇಶ ಅರಕೇರಿ ಹಾಗೂ ಸದಸ್ಯರಾದ ಸಲಭಣ್ಣ ಹಂಪರಗುಂದಿ, ಅಬ್ದುಲ್ ರಹಮಾನ್, ಬಸವರಾಜ ಗೋಪಾಲಪುರ್, ಮಲ್ಲು ಹಡಪದ ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

ಹೋರಾಟ.!

ಕತ್ತಲು ಬಯಸುವವರಿಗೆ
ಇರುಳೇ ಬೇಕೆಂದೇನಿಲ್ಲ..
ಮನೆಯ ಕಿಟಕಿ ಬಾಗಿಲುಗಳ
ಮುಚ್ಚಿ ಪರದೆಯೆಳೆದರೆ ಸಾಕು.!
ದೀಪಗಳನೆಲ್ಲ ನಂದಿಸಿದರೆ ಸಾಕು.!

ಕಂಗಳಿಗೊಂದು ಕಪ್ಪುಪಟ್ಟಿ
ಕಟ್ಟಿಕೊಂಡು ಕುಳಿತರೂ ಸಾಕು.!
ಹೊದ್ದಿಕೆಯಲಿ ಹುದುಗಿಕೊಂಡು
ಕಣ್ಮುಚ್ಚಿ ಮಲಗಿದರೂ ಸಾಕು.!
ತಮವ ಬಿಗಿದಪ್ಪಿಕೊಂಡರೆ ಸಾಕು.!

ಬೆಳಕು ಬೇಕೆನ್ನುವವರು ಮಾತ್ರ..
ಬತ್ತಿ ಹೊಸೆಯಬೇಕು,
ತೈಲ ಸುರಿಯಬೇಕು,
ಕಡ್ಡಿ ಗೀರಲೇಬೇಕು
ಹಣತೆ ಹಚ್ಚಲೇಬೇಕು.!

ರಾತ್ರಿಯೆಲ್ಲ ಅಡಿಗಡಿಗೂ
ಕತ್ತಲೊಂದಿಗೆ ಸೆಣಸಲೇಬೇಕು.!
ಹಚ್ಚಿದ ಹಣತೆ ಗಾಳಿಗಾರದಂತೆ
ಎಡಬಿಡದೆ ಕಾಪಿಡಲೇಬೇಕು.!
ನಂದದಂತೆ ನೋಡುತ್ತ ಕೂರಲೇಬೇಕು.!


ಮೂಡಣದಿ ರವಿ ಮೂಡುವವರೆಗೆ
ಇರುಳೆಲ್ಲ ಸಹನೆಯಲಿ ಕಾಯಲೇಬೇಕು
ತಪಿಸಲೇಬೇಕು ಪರಿತಪಿಸಲೇಬೇಕು
ಬೆಳಕಿನ ಮಂತ್ರ ಜಪಿಸಲೇಬೇಕು
ಬೆಳಕಿಗಾಗಿ ಕತ್ತಲಯುದ್ಧ ಗೆಲ್ಲಲೇಬೇಕು.!

ಎ.ಎನ್.ರಮೇಶ್. ಗುಬ್ಬಿ.

## ಬಿಸಿಲಿನ ತಾಪಮಾನ ಹಿನ್ನೆಲೆ: ಸರ್ಕಾರಿ ಕಚೇರಿ ಸಮಯ ಬದಲಾವಣೆ ರಾಜ್ಯ ಸರ್ಕಾರ ಆದೇಶ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಹೆಚ್ಚುತ್ತಿರುವ ಬಿಸಿಲಿನ ತಾಪಮಾನವನ್ನು ಪರಿಗಣಿಸಿ ಬೆಳಗಾವಿ ಹಾಗೂ ಕಲಬುರಗಿ ವಿಭಾಗಗಳ ಜಿಲ್ಲೆಗಳಲ್ಲಿ ಸರ್ಕಾರಿ ಕಚೇರಿ ಕೆಲಸದ ವೇಳೆಯಲ್ಲಿ ತಾತ್ಕಾಲಿಕ ಬದಲಾವಣೆ ಮಾಡಲಾಗಿದೆ ಎಂದು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ಎಸ್‌ಸಿ/ಎಸ್‌ಟಿ ನೌಕರರ ಸಮನ್ವಯ ಸಮಿತಿ ಸಲ್ಲಿಸಿದ್ದ ಮನವಿಯನ್ನು ಮಾನವೀಯ ದೃಷ್ಟಿಯಿಂದ ಪರಿಗಣಿಸಿ ಈ ನಿರ್ಧಾರ ಕೈಗೊಳ್ಳಲಾಗಿದೆ.**



ಸರ್ಕಾರದ ಆದೇಶ ಸಂಖ್ಯೆ ಸಿಆಸುಇ (ಆಸು) 71 ಸ್ತ್ರೀಮರ 2026, ದಿನಾಂಕ 31.03.2026ರ ಅನ್ವಯ, 2026ರ ಏಪ್ರಿಲ್ ಮತ್ತು ಮೇ ಮಾಹೆಗಳಲ್ಲಿ ಹೆಚ್ಚಿನ ಬಿಸಿಲಿನ ತಾಪಮಾನ ಇರುವ ಹಿನ್ನೆಲೆಯಲ್ಲಿ ಕಚೇರಿ ವೇಳೆಯನ್ನು ಬದಲಿಸಲಾಗಿದೆ. ಯಾವ ಜಿಲ್ಲೆಗಳಿಗೆ ಅನ್ವಯ ಬೆಳಗಾವಿ ವಿಭಾಗದ ವಿಜಯಪುರ ಜಿಲ್ಲೆ ಬೆಳಗಾವಿ ವಿಭಾಗದ ಬಾಗಲಕೋಟೆ ಜಿಲ್ಲೆ ಕಲಬುರಗಿ ವಿಭಾಗದ ಎಲ್ಲಾ ಜಿಲ್ಲೆಗಳು ಹೊಸ ಕಚೇರಿ ಸಮಯ ಬೆಳಿಗ್ಗೆ 8.00 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಪ್ರಸ್ತುತ ಜಾರಿಯಲ್ಲಿರುವ ಕಚೇರಿ ವೇಳಾಪಟ್ಟಿಗೆ ಬದಲಾಗಿ ಈ ಸಮಯವು ಏಪ್ರಿಲ್ ಮತ್ತು ಮೇ ಮಾಹೆಗಳಿಗೆ ಮಾತ್ರ ಅನ್ವಯವಾಗಲಿದೆ. ಸರ್ಕಾರದ ಸೂಚನೆ ಸರ್ಕಾರಿ ನೌಕರರು ಬದಲಾದ ವೇಳೆಯಲ್ಲಿ ಎಂದಿನಂತೆ ಕರ್ತವ್ಯ ನಿರ್ವಹಿಸಬೇಕು. ಸಾರ್ವಜನಿಕರಿಗೆ ಯಾವುದೇ ಅನಾನುಕೂಲವಾಗದಂತೆ ಸೇವೆ ನೀಡಬೇಕು. ಜಿಲ್ಲಾಧಿಕಾರಿಗಳು ಅಥವಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತುರ್ತು ಸಂದರ್ಭಗಳಲ್ಲಿ ಸೂಚಿಸಿದರೆ ಸಮಯದ ಮಿತಿ ಇಲ್ಲದೆ ಕರ್ತವ್ಯ ನಿರ್ವಹಿಸಬೇಕಾಗಿದೆ. ಈ ಆದೇಶವನ್ನು ರಾಜ್ಯಪಾಲರ ಆಜ್ಞಾನುಸಾರ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಅಧೀನ ಕಾರ್ಯದರ್ಶಿ ವಿಮಲಾಕ್ಷಿ ಬಿ ಅವರು ಹೊರಡಿಸಿದ್ದಾರೆ.

## ಮಾನವಿ ಪುರಸಭೆಯಿಂದ ಸಹಾಯಧನಕ್ಕೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯ ಮಾನವಿ ಪಟ್ಟಣದ ಪುರಸಭೆಯಿಂದ 2026–27ನೇ ಸಾಲಿಗಾಗಿ ಶೇ.5 ಯೋಜನೆಯಡಿ ವಿಕಲಾಂಗ ಚೇತನರಿಗೆ ಎಸ್.ಎಫ್.ಸಿ. ಅನುದಾನದಲ್ಲಿ ಜೀವ ವಿಮಾ ಮಾಡಿಸಿಕೊಳ್ಳಲು ಸಹಾಯ ಧನಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.**

ಆಸಕ್ತರು ಅರ್ಜಿಯೊಂದಿಗೆ 2 ಭಾವಚಿತ್ರಗಳು, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ ಕಾರ್ಡ್ ಮತ್ತು ರೇಷನ್ ಕಾರ್ಡ್, ವಿಕಲಾಂಗ ಚೇತನರ ಗುರುತಿನ ಚೀಟಿ, ಬ್ಯಾಂಕ್ ಪಾಸ್ ಪುಸ್ತಕ, ವಯಸ್ಸಿನ ದೃಢೀಕರಣ ಪತ್ರ, ಜಿಲ್ಲಾ ತಾಲ್ಲೂಕ ವೈದ್ಯಾಧಿಕಾರಿಗಳಿಂದವೈದಕೀಯ ದೈಹಿಕ ದೃಢೀಕರಣ ಪ್ರಮಾಣ ಪತ್ರಗಳನ್ನು ಏಪ್ರಿಲ್ 15 ರೊಳಗಾಗಿ ಈ ಕಚೇರಿಯ ಕಾರ್ಯಾಲಯಕ್ಕೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ವೇಳೆಯಲ್ಲಿ ಮಾನವಿ ಪಟ್ಟಣದ ಪುರಸಭೆಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ ಎಂದು ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಗಲಕೋಟೆ ಉಪಚುನಾವಣೆ: 15ನೇ ವಾರ್ಡ್‌ನಲ್ಲಿ ಶಾಸಕ ಹಂಪನಗೌಡ ಬಾದರ್ಲಿ ಅಬ್ಬರದ ಪ್ರಚಾರ

ನೈಜ್ಯ ದೆಸೆ ನ್ಯೂಸ್

**ಬಾಗಲಕೋಟೆ: ನಗರದ 15ನೇ ವಾರ್ಡ್‌ನಲ್ಲಿ ಇಂದು ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಪರವಾಗಿ ಸಿಂಧನೂರು ಕ್ಷೇತ್ರದ ಜನಪ್ರಿಯ ಶಾಸಕರಾದ ಹಂಪನಗೌಡ ಬಾದರ್ಲಿ ಅವರು ಬಿರುಸಿನ ಮತಯಾಚನೆ ನಡೆಸಿದರು.**

ಮನೆ ಮನೆಗೆ ತೆರಳಿ ಮತದಾರರ ಮನ ಗೆಲ್ಲುವ ಪ್ರಯತ್ನ ಮಾಡಿದ ಅವರು, ಕಾಂಗ್ರೆಸ್ ಸರ್ಕಾರದ ಸಾಧನೆಗಳನ್ನು ಜನರ ಮುಂದಿಟ್ಟರು.ಗ್ಯಾರಂಟಿ ಯೋಜನೆಗಳೇ ಕಾಂಗ್ರೆಸ್ ಶಕ್ತಿ ಪ್ರಚಾರದ ವೇಳೆ ಮಾತನಾಡಿದ ಹಂಪನಗೌಡ ಬಾದರ್ಲಿ ಅವರು, "ರಾಜ್ಯದ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳು ಪ್ರತಿಯೊಂದು ಕುಟುಂಬಕ್ಕೂ ಆಸರೆಯಾಗಿವೆ. ಬಡವರ ಮತ್ತು ಮಧ್ಯಮ ವರ್ಗದವರ ಜೀವನಮಟ್ಟ ಸುಧಾರಿಸಲು ಈ ಯೋಜನೆಗಳು ಸಹಕಾರಿಯಾಗಿವೆ. ಈ ಅಭಿವೃದ್ಧಿ ಪಥ ಮುಂದುವರಿಯಬೇಕಾದರೆ ಕಾಂಗ್ರೆಸ್ ಪಕ್ಷಕ್ಕೆ ನಿಮ್ಮ ಬೆಂಬಲ ಅತ್ಯಗತ್ಯ," ಎಂದು ತಿಳಿಸಿದರು. ಹಿರಿಯ ನಾಯಕ ಹೆಚ್.ವೈ. ಮೇಟಿ



ಅವರು ಬಾಗಲಕೋಟೆ ಕ್ಷೇತ್ರಕ್ಕೆ ನೀಡಿದ ಕೊಡುಗೆಗಳನ್ನು ಸ್ಮರಿಸಿದ ಶಾಸಕರು, "ಹೆಚ್. ವೈ. ಮೇಟಿ ಅವರು ಈ ಭಾಗದ ಸಮಗ್ರ ಅಭಿವೃದ್ಧಿಗೆ ಹಗಲಿರುಳು ಶ್ರಮಿಸಿದ್ದಾರೆ.

ಅವರ ದೂರದೃಷ್ಟಿಯ ಕೆಲಸಗಳು ಇಂದಿಗೂ ಜನಮಾನಸದಲ್ಲಿವೆ. ಅವರ ಅಭಿವೃದ್ಧಿ ಪರ ಪರಂಪರೆಯನ್ನು ಮುಂದುವರಿಸಲು ಯುವ ನಾಯಕ ಉಮೇಶ್ ಮೇಟಿ ಅವರನ್ನು ಅತಿ ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸಿ ವಿಧಾನಸೌಧಕ್ಕೆ ಕಳುಹಿಸಿಕೊಡಬೇಕು," ಎಂದು ಮತದಾರರಲ್ಲಿ ಮನವಿ ಮಾಡಿದರು. ವಾರ್ಡ್‌ನ ಪ್ರತಿ ಗಲ್ಲಿ–ಗಲ್ಲಿಗಳಲ್ಲಿ ಸಂಚರಿಸಿದ ಶಾಸಕರು, ಮತದಾರರನ್ನು ಖುದ್ದಾಗಿ ಭೇಟಿಯಾಗಿ ಕುಂದುಕೊರತೆಗಳನ್ನು ಆಲಿಸಿದರು. ಜನರ ಸಮಸ್ಯೆಗಳಿಗೆ ಶೀಘ್ರ ಪರಿಹಾರ ಒದಗಿಸುವ ಭರವಸೆ ನೀಡಿದ ಅವರು, ಅಭಿವೃದ್ಧಿಯ ಪರವಾಗಿ ಕಾಂಗ್ರೆಸ್ ಅಭ್ಯರ್ಥಿಯನ್ನು ಬೆಂಬಲಿಸುವಂತೆ ಕೋರಿದರು.

ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರು, ಕಾರ್ಯಕರ್ತರು ಹಾಗೂ ಅಪಾರ ಸಂಖ್ಯೆಯ ಸಾರ್ವಜನಿಕರು ಭಾಗವಹಿಸಿ ಕಾಂಗ್ರೆಸ್ ಪರ ಘೋಷಣೆಗಳನ್ನು ಕೂಗುವ ಮೂಲಕ ಹರ್ಷ ವ್ಯಕ್ತಪಡಿಸಿದರು. ಪ್ರಚಾರದ ಉದ್ದಕ್ಕೂ ಕಂಡುಬಂದ ಜನಸಾಗರ ಮತ್ತು ಜನರ







ಉತ್ಸಾಹವು ಈ ಬಾರಿ ಬಾಗಲಕೋಟೆಯಲ್ಲಿ ಕಾಂಗ್ರೆಸ್ ಪಕ್ಷ ಭರ್ಜರಿ ಗೆಲುವು ಸಾಧಿಸುವುದು ನಿಶ್ಚಿತ ಎಂಬ ವಿಶ್ವಾಸವನ್ನು ಮೂಡಿಸಿದೆ. ಕಾರ್ಯಕ್ರಮದಲ್ಲಿ ಸ್ಥಳೀಯ ಕಾಂಗ್ರೆಸ್ ಘಟಕದ ಪ್ರಮುಖರು ಹಾಗೂ ಮುಂಚೂಣಿ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# "ಸಹನಾ ಅನುಬಂಧ" ಸಹನಾ ಶಾಲೆಯ 15ನೇ ವಾರ್ಷಿಕೋತ್ಸವ ಸಮಾರಂಭ ಯಶಸ್ವಿ.




ನೈಜ್ಯ ದೆಸೆ ನ್ಯೂಸ್

**ಮುದಗಲ್: ಸಹನಾ ಶಾಲೆಯಲ್ಲಿ 15ನೇ ವಾರ್ಷಿಕೋತ್ಸವ ಸಮಾರಂಭವು ಅದ್ದೂರಿಯಾಗಿ ನಡೆಯಿತು. ಕಾರ್ಯಕ್ರಮವನ್ನು ಸ್ಥಳೀಯ ಗಣ್ಯರು ಹಾಗೂ ಶಾಲೆಯ ಆಡಳಿತ ಮಂಡಳಿ ಸದಸ್ಯರು ಸಸಿಗೆ ನೀರೆರುದುವರ ಮೂಲಕ ಉದ್ಘಾಟಿಸಿದರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಡಿ.ಡಿ.ಎಂಮಾಪಾಶಮಾತನಾಡಿ ಶಿಕ್ಷಕರ ಜೊತೆ ಪಾಲಕರ ಸಹಕಾರ ಮಕ್ಕಳ ಬೆಳವಣಿಗೆಗೆ ಅತ್ಯವಶ್ಯಕ ಎಂದು ವಿವರಿಸಿ,ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕ ಭಾಷಣ ಮಾಡಿದರು.**

ಶಿಕ್ಷಣದ ಮಹತ್ವವನ್ನು ವಿವರಿಸಿ, ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಉತ್ತಮ ಸಾಧನೆ ಮಾಡಲು ಪ್ರೋತ್ಸಾಹಿಸಿದರು. ವಿದ್ಯಾರ್ಥಿಗಳು ನೃತ್ಯ, ಸಂಗೀತ, ನಾಟಕ ಸೇ–ರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಅದ್ಭುತವಾಗಿ ಪ್ರದರ್ಶಿಸಿ ಎಲ್ಲರ ಮನಸೂರೆಗೊಂಡರು. ವಿಶೇಷವಾಗಿ ಬಾಲಕಿಂ–ಯರ ನೃತ್ಯ ಪ್ರೇಕ್ಷಕರಿಂದ ಹೆಚ್ಚಿನ ಮೆಚ್ಚುಗೆ ಪಡೆದವು. ಶಾಲೆಯ ಮುಖ್ಯ ಶಿಕ್ಷಕರು ವಾರ್ಷಿಕ ವರದಿಯನ್ನು ಮಂಡಿಸಿ, ಕಳೆದ ವರ್ಷದ ಸಾಧನೆಗಳನ್ನು ವಿವರಿಸಿದರು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ಅಧ್ಯಕ್ಷರು ಶ್ರೀಮತಿ ಇರ್ಫಾನ ಬೇಗಂ ಮಾತನಾಡಿ ಮಕ್ಕಳ ಕಲಿಕೆಯಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಮತ್ತು ಮಕ್ಕಳಿಗೆ ಸಮಯದ ಮಹತ್ವವನ್ನು ತಿಳಿಸಿದರು. ಶಾಲೆಯ ಕಾರ್ಯದರ್ಶಿಯವರಾದ ಎಂ.ಡಿ ಜಾವಿದ್ ಹುಸೇನ್ ರವರು ಮಾತನಾಡಿ ಮಕ್ಕಳು ಕಲಿಕೆಯ ಜೊತೆಗೆ ಒಳ್ಳೆಯ ಸಂಸ್ಕಾರ ಬೆಳೆಸಿಕೊಳ್ಳಬೇಕು ಹಾಗೂ ಮಕ್ಕಳು ಪ್ರತಿಯೊಂದು ಕೆಲಸದಲ್ಲಿ ಭಾಗಿಯಾಗಬೇಕು ಎಂದು ತಿಳಿಸಿದರು., ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕಿಯರಾದ ಆಯಿಷ ಬೇಗಂ, ಹೀನ ಬೇಗಂ, ಪ್ರಿಯಾಂಕ,ಕವಿತಾ, ಕಾವೇರಿ ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಶಾಲೆಯ ಶಿಕ್ಷಕಿಯಾದ ಅಸ್ಮ ಬೇಗಂ ನಿರೂಪಿಸಿದರು. ಈ ಸಮಾರಂಭದಲ್ಲಿ ಪಾಲ್ಗೊಂಡ ಪೋಷಕರು ಹಾಗೂ ಸಾರ್ವಜನಿಕರು ವಿದ್ಯಾರ್ಥಿಗಳ ಪ್ರತಿಭೆಯನ್ನು ಕೊಂಡಾಡಿದರು. ಕಾರ್ಯಕ್ರಮವು ಯಶಸ್ವಿಯಾಗಿ ನೆರವೇರಿತು.

# ನಂಜಲದಿನ್ನಿ ಗ್ರಾಮದಲ್ಲಿ ಸೊಳ್ಳೆಗಳಿಂದ ಹರಡುವ ರೋಗಗಳು ಹಾಗೂ ಕ್ಯಾನ್ಸರ್ ಕುರಿತು ಅರಿವು ಮತ್ತು ಉಚಿತ ತಪಾಸಣಾ ಶಿಬಿರ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕಿನ ನಂಜಲದಿನ್ನಿ ಗ್ರಾಮದಲ್ಲಿ ಇತ್ತೀಚೆಗೆ ಸೊಳ್ಳೆಗಳಿಂದ ಹರಡುವ ರೋಗಗಳು ಮತ್ತು ಅಸಾಂಕ್ರಮಿಕ ರೋಗಗಳ ನಿಯಂತ್ರಣ ಕಾರ್ಯಕ್ರಮದ ಅಂಗವಾಗಿ ಸಾರ್ವಜನಿಕರಿಗೆ ಆರೋಗ್ಯ ಶಿಕ್ಷಣ ಮತ್ತು ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಯಶಸ್ವಿಯಾಗಿ ಆಯೋಜಿಸಲಾಗಿತ್ತು.**

ಈ ಕಾರ್ಯಕ್ರಮವನ್ನು ಪೀಪಲ್ ಟು ಪೀಪಲ್ ಹೆಲ್ತ್ ಫೌಂಡೇಶನ್ ಮತ್ತು ಜೆಇ ಹೆಲ್ತ್ ಕೇರ್ ಸಂಸ್ಥೆಗಳ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಮುಖ್ಯವಾಗಿ ಕ್ಯಾನ್ಸರ್ ರೋಗದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲಾಯಿತು. ಕ್ಯಾನ್ಸರ್ ಎಂದರೇನು, ಅದರ ಆರಂಭಿಕ ಚಿಹ್ನೆಗಳು ಮತ್ತು ಲಕ್ಷಣಗಳನ್ನು ಹೇಗೆ ಗುರುತಿಸಬೇಕು ಎಂಬ ಬಗ್ಗೆ ತಜ್ಞರು ಮಾಹಿತಿ ನೀಡಿದರು. ವಿಶೇಷವಾಗಿ ಕೆಲವು



ಮಾರಕ ಕ್ಯಾನ್ಸರ್ ಕಾಯಿಲೆಗಳಿಗೆ ಆರಂಭಿಕ ಹಂತದಲ್ಲಿಯೇ ಸುಲಭ ಹಾಗೂ ಸುರಕ್ಷಿತವಾಗಿ ಮಾಡಿಸಿಕೊಳ್ಳಬಹುದಾದ 'ಸ್ಕ್ರೀನಿಂಗ್ ಟೆಸ್ಟ್' ಸೌಲಭ್ಯಗಳ ಬಗ್ಗೆ ಸಾರ್ವಜನಿಕರಿಗೆ ಮನವರಿಕೆ ಮಾಡಿಕೊಡಲಾಯಿತು.

ಇದೇ ಸಂದರ್ಭದಲ್ಲಿ ಸೊಳ್ಳೆಗಳಿಂದ ಹರಡುವ ಮಲೇರಿಯಾ, ಡೆಂಗ್ಯೂ,ಆನೆಕಾಲು ರೋಗ,ಮೆದಳು ಜ್ವರ ದಂತಹ ರೋಗಗಳ ನಿಯಂತ್ರಣದ ಬಗ್ಗೆಯೂ ಸಾರ್ವಜನಿಕರಿಗೆ ಅರಿವು ಮೂಡಿಸಿ, ಉಚಿತವಾಗಿ ಆರೋಗ್ಯ ತಪಾಸಣೆಯನ್ನು ನಡೆಸಲಾಯಿತು. ಈ ಶಿಬಿರದಲ್ಲಿ ತಾಲೂಕಾ ವಿ.ಬಿ.ಡಿ ಮೇಲ್ವಿಚಾರಕರಾದ ಎಫ್.ಎ. ಹಣಗಿ, ನರ್ಸಿಂಗ್ ಅಧಿಕಾರಿಗಳಾದ ಆಂಜನೇಯ,



ಪ್ರಯೋಗಾಲಯ ತಂತ್ರಜ್ಞರಾದ (LTO) ಗುರುಲಿಂಗ, ಸಮುದಾಯ ಅಧಿಕಾರಿ ಹನುಮಂತ, ಆರೋಗ್ಯ ಕಾರ್ಯಕರ್ತೆ (ANM) ತನುಜಾ ಹಾಗೂ ಆಶಾ ಕಾರ್ಯಕರ್ತೆಯರಾದ ರೇಣುಮ್ಮ, ಅಂಗನವಾಡಿ ಕಾರ್ಯಕರ್ತೆಯರಾದ ಲಕ್ಷ್ಮಿ,ರೇಷ್ಮಾ ಮತ್ತು ತಂಡದವರು ಉಪಸ್ಥಿತರಿದ್ದು ಯಶಸ್ವಿಯಾಗಿ ಕಾರ್ಯಕ್ರಮ ನಡೆಸಿಕೊಟ್ಟರು. ಗ್ರಾಮದ ಮುಖಂಡರು ಹಾಗೂ ಸಾರ್ವಜನಿಕರು ಈ ಉಚಿತ ಶಿಬಿರದ ಪ್ರಯೋಜನವನ್ನು ಪಡೆದುಕೊಂಡರು.

# ಜೆಡಿಎಸ್ ಸಿಂಧನೂರು ಘಟಕ ವತಿಯಿಂದ ವಿಶೇಷ ಸಮಗ್ರ ಪರಿಷ್ಕರಣೆ (SIR) ಬಿಎಲ್‌ಎ ಕಾರ್ಯಾಗಾರ ಯಶಸ್ವಿ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ವಾಸವಿ ಕಲ್ಯಾಣ ಮಂಟಪದಲ್ಲಿ ಕರ್ನಾಟಕ ಪ್ರದೇಶ ಜನತಾದಳ (ಜೆಡಿಎಸ್) ವತಿಯಿಂದ ಆಯೋಜಿಸಲಾದ ವಿಶೇಷ ಸಮಗ್ರ ಪರಿಷ್ಕರಣೆ (Special Intensive Revision ? SIR) ಕುರಿತ ಬಿಎಲ್‌ಎ ತರಬೇತಿ ಕಾರ್ಯಾಗಾರವು ಉತ್ಸಾಹಭರಿತವಾಗಿ ಹಾಗೂ ಯಶಸ್ವಿಯಾಗಿ ನಡೆಯಿತು.**

ಕ್ಷೇತ್ರದ ವಿವಿಧ ಮತಗಟ್ಟೆಗಳಿಂದ ಆಗಮಿಸಿದ ಬೂತ್ ಲೆವೆಲ್ ಏಜೆಂಟ್‌ಗಳು (BLA) ಕಾರ್ಯಕ್ರಮದಲ್ಲಿ ಭಾಗವಹಿಸಿ ಮತದಾರರ ಪಟ್ಟಿ ಪರಿಷ್ಕರಣೆ, ಹೊಸ ಮತದಾರರ ನೋಂದಣಿ ಹಾಗೂ ತಿದ್ದುಪಡಿ ಪ್ರಕ್ರಿಯೆಗಳ ಕುರಿತು ಸಮಗ್ರ ಮಾಹಿತಿ ಪಡೆದುಕೊಂಡರು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಮಾಜಿ ಸಚಿವರು ಹಾಗೂ (KOF) ರಾಜ್ಯಾಧ್ಯಕ್ಷರಾದ ಶ್ರೀ ವೆಂಕಟರಾವ್ ನಾಡಗೌಡ ಅವರು, ಮತದಾರರ ಪಟ್ಟಿಯ ಶುದ್ಧೀಕರಣ ಪ್ರಜಾಪ್ರಭುತ್ವದ ಬಲವರ್ಧನೆಗೆ ಅತ್ಯಂತ ಮಹತ್ವದ್ದಾಗಿದೆ ಎಂದು ತಿಳಿಸಿದರು.

2002ರ ನಂತರ ರಾಜ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆ ನಡೆಯದಿರುವ ಹಿನ್ನೆಲೆಯಲ್ಲಿ ಈ ಬಾರಿ ನಡೆಯುತ್ತಿರುವ



ಪರಿಷ್ಕರಣೆ ಅತ್ಯಂತ ಮಹತ್ವ ಪಡೆದಿದೆ ಎಂದರು. 2025ರ ಜನವರಿ 1ರ ಅರ್ಹತಾ ದಿನಾಂಕದ ಆಧಾರದ ಮೇಲೆ ಮತದಾರರ ಪಟ್ಟಿ ಪರಿಷ್ಕರಣೆ ನಡೆಯಲಿದ್ದು, ಪ್ರತಿ ಮತಗಟ್ಟೆಯಲ್ಲಿ ಮತದಾರರ ಸಂಖ್ಯೆಯನ್ನು 1500ರಿಂದ 1200ಕ್ಕೆ ಇಳಿಸುವ ಕ್ರಮ ಕೈಗೊಳ್ಳಲಾಗಿದೆ. ಇದರ ಪರಿಣಾಮವಾಗಿ ಮತಗಟ್ಟೆಗಳ ಸಂಖ್ಯೆ ಹೆಚ್ಚಳವಾಗಲಿದ್ದು, ಮತದಾನ ಪ್ರಕ್ರಿಯೆ ಇನ್ನಷ್ಟು ಸುಗಮವಾಗಲಿದೆ ಎಂದು ತಿಳಿಸಿದರು. ಹೊಸದಾಗಿ ರಚನೆಯಾಗುವ ಬೂತ್‌ಗಳ ಸಂಪೂರ್ಣ ವಿವರಗಳನ್ನು ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ (CEO) ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುತ್ತದೆ.

ಈಗಾಗಲೇ ಸೆಪ್ಟೆಂಬರ್ 23ರಂದು ರಾಜ್ಯದಾದ್ಯಂತ 50,000ಕ್ಕೂ ಹೆಚ್ಚು ಬೂತ್ ಲೆವೆಲ್ ಅಧಿಕಾರಿಗಳಿಗೆ (BLO) ತರಬೇತಿ ನೀಡಲಾಗಿದೆ ಎಂದು ಮಾಹಿತಿ ನೀಡಿದರು. ರಾಜ್ಯದ ಮತದಾರರ ಅಂಕಿಅಂಶಗಳನ್ನು ಹಂಚಿಕೊಂಡ ಅವರು, ಒಟ್ಟು ಮತದಾರರು 5,52,08,56 ಇದ್ದು, ಪುರುಷ ಮತದಾರರು 2,75,62,634 ಹಾಗೂ ಮಹಿಳಾ ಮತದಾರರು 2,76,40,836 ಇದ್ದಾರೆ ಎಂದರು. ರಾಜ್ಯದಲ್ಲಿ ಒಟ್ಟು 58,932 ಮತಗಟ್ಟೆಗಳು ಕಾರ್ಯನಿರ್ವಹಿಸುತ್ತಿದ್ದು, ಪ್ರಥಮ ಬಾರಿಗೆ ಮತದಾನ ಮಾಡುವವರು 8,02,423 ಜನರಿದ್ದಾರೆ. ವಿಕಲಚೇತನ ಮತದಾರರು



6,28,554 ಹಾಗೂ 85 ವರ್ಷ ಮೇಲ್ಪಟ್ಟ ಹಿರಿಯ ಮತದಾರರು ಸುಮಾರು 2,20,000 ಜನರಿದ್ದಾರೆ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ತಾಲೂಕು ಅಧ್ಯಕ್ಷರಾದ ಶ್ರೀ ಬಸವರಾಜ್ ನಾಡಗೌಡ ಅವರು ಮಾತನಾಡಿ, ಪಕ್ಷದ ಕಾರ್ಯಕರ್ತರು ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯದಲ್ಲಿ ಸಕ್ರಿಯವಾಗಿ ಭಾಗವಹಿಸಿ ಪ್ರತಿಯೊಬ್ಬ ಅರ್ಹ ಮತದಾರನಿಗೂ ಮತದಾನದ ಹಕ್ಕು ದೊರಕುವಂತೆ ಕೆಲಸ ಮಾಡಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಶ್ರೀ ಅಭಿಷೇಕ್ ನಾಡಗೌಡ ಸೇರಿದಂತೆ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಬಿಎಲ್‌ಎ ಸದಸ್ಯರು ಉಪಸ್ಥಿತರಿದ್ದು, ತರಬೇತಿ ಕಾರ್ಯಾಗಾರವು ಯಶಸ್ವಿಯಾಗಿ ಸಮಾಪ್ತಿಯಾಯಿತು.

## ನೇಮಕಾತಿ ಪ್ರಕಟಣೆ

NITCON ನೇಮಕಾತಿ 2026–100 ಜೂನಿಯರ್ ಎಂಜಿನಿಯರ್ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಮಾರ್ಚ್ 31, 2026 NITCON ನೇಮಕಾತಿ 2026: 100 ಜೂನಿಯರ್ ಎಂಜಿನಿಯರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಉತ್ತರ ಭಾರತ ತಾಂತ್ರಿಕ ಸಲಹಾ ಸಂಸ್ಥೆ ಲಿಮಿಟೆಡ್ ಮಾರ್ಚ್ 2026 ರ ಓಖಖಿಅಔಓ ಅಧಿಕೃತ ಅಧಿಸೂಚನೆಯ ಮೂಲಕ ಜೂನಿಯರ್ ಎಂಜಿನಿಯರ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ದೆಹಲಿ ನವದೆಹಲಿ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 08–ಏಪ್ರಿಲ್–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 01–04–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 08–ಏಪ್ರಿಲ್–2026 ಅಧಿಕೃತ ವೆಬ್‌ಸೈಟ್: nitcon.org

# ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ದತ್ತಿ ಉಪನ್ಯಾಸ

**ನೈಜ್ಯ ದೆಸೆ ನ್ಯೂಸ್**

**ಮಾನ್ವಿ.: ಪಟ್ಟಣದ ಕಳಿಂಗ ಪಿ.ಯು. ಕಾಲೇಜಿನಲ್ಲಿ ಶನಿವಾರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಮಾನ್ವಿ ವತಿಯಿಂದ ನಡೆದ ವಿವಿಧ ದತ್ತಿ ದಾನಿಗಳ ಉಪನ್ಯಾಸ ಕಾರ್ಯಕ್ರಮದಲ್ಲಿ ದಿ.ಶ್ರೀ ರಾಮಚಂದ್ರಪ್ಪ ದತ್ತಿ ವಿಷಯ ರಾಮಚಂದ್ರಪ್ಪನವರ ಕುರಿತು ನಿವೃತ್ತ ಶಿಕ್ಷಕ ಮೂಕಪ್ಪ ಕಟ್ಟಿಮನಿ ಉಪನ್ಯಾಸ ನೀಡಿ ರಾಮಚಂದ್ರಪ್ಪನವರು ಮಾನ್ವಿ ಪಟ್ಟಣದಲ್ಲಿ ಅನೇಕ ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವುದರ ಜೊತೆಗೆ ಸಮೂಹವನ್ನು ತಮ್ಮೊಂದಿಗೆ ಮುನ್ನಡೆಸುವ ಮೂಲಕ ಇಂದಿಗೂ ಕೂಡ ಸ್ಮರಣೆಯರಾಗಿದ್ದಾರೆ.**

ವೃಕ್ಷಮಾತೆ ಸಾಲುಮರದ ತಿಮ್ಮಕ್ಕನವರನ್ನು ಪಟ್ಟಣಕ್ಕೆ ಕರೆಸಿ ಜನರಲ್ಲಿ ಪರಿಸರ ಜಾಗೃತಿಯನ್ನು ಮೂಡಿಸುವುದರ ಜೊತೆಯಲ್ಲಿ ಪಟ್ಟಣದಲ್ಲಿ ಸಾವಿರಾರು ಸಸಿಗಳನ್ನು ನೆಟ್ಟು ಪೋಷಿಸಿದ್ದಾರೆ.




ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಘಟಕದ ಅಧ್ಯಕ್ಷರಾಗಿ ಕನ್ನಡ ಪರ ಅನೇಕ ಕಾರ್ಯಕ್ರಮಗಳನ್ನು ಅಯೋಜಿಸುವ ಮೂಲಕ ಕನ್ನಡ ಸಾಹಿತ್ಯ ಪರಿಷತ್ ಅನ್ನು ಮನೆ,ಮನೆಗೆ ಕೊಂಡೊಯ್ದಿದ್ದಾರೆ ಎಂದು ತಿಳಿಸಿದರು. ಮಾಜಿ ಎ.ಪಿ.ಎಂ.ಸಿ. ಸದಸ್ಯರಾದ ಶಿವರಾಜ ನಾಯಕ ಮಾತನಾಡಿ ಕ.ಸಾ.ಪ ತಾಲೂಕು ಘಟಕವು ದತ್ತಿ ದಾನಿಗಳು ನೀಡಿದ ವಿವಿಧ ವಿಷಯಗಳ ಕುರಿತು ಶಾಲೆಗಳಲ್ಲಿ ಉಪನ್ಯಾಸಕ–ರಿಂದ ಉಪನ್ಯಾಸವನ್ನು ನೀಡುವ ಮೂಲಕ ಮಕ್ಕಳಲ್ಲಿ ಕನ್ನಡ ಭಾಷೆಯ ಕುರಿತು ಜ್ಞಾನವನ್ನು ಹೆಚ್ಚಿಸುತ್ತಿದೆ ಎಂದು ತಿಳಿಸಿದರು.

ಆರ್. ಲಲಿತಮ್ಮನವರ ಹೆಸರಿನ ದತ್ತಿ ವಿಷಯ ಕನ್ನಡ ಸಾಹಿತ್ಯ ಕುರಿತು ನಿವೃತ್ತ ಮುಖ್ಯಗುರುಗಳಾದ ಮಹಿಮೂದಬೇಗಂ, ದಿ. ಮನೋರಂಜನ ಹೆಸರಿನಲ್ಲಿ ವಚನ ಸಾಹಿತ್ಯ ವಿಷಯದ ಕುರಿತು ಜಿ.ಎಂ. ರಂಗಪ್ಪ ಮೇದಾ ಉಪನ್ಯಾಸ ನೀಡಿದರು. ಹಿರಿಯ ಸಾಹಿತಿ ಅಂಬಮ್ಮ ಪ್ರತಾಪಸಿಂಗ್ ರವರು ಸಾಹಿತ್ಯ ಕ್ಷೇತ್ರದಲ್ಲಿ ಸಲ್ಲಿಸಿದ ಕೃಷಿಗಾಗಿ ದಿ.ಕುಂಬಳೂರು ಆದಮ್ಮ ಈರಣ್ಣ ಸ್ಮಾರಕ ದತ್ತಿ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು. ಎಂ.ಮಲ್ಲಿಕಾರ್ಜುನಗೌಡ ಪೋತ್ನಾಳ ರವರು ಹೊಸದಾಗಿ ಕಸಾಪಗೆ ಮ–ರಿಲಿಂಗಣ್ಣಗೌಡ ಸ್ಮಾರಕ ದತ್ತಿಯನ್ನು ನೀಡಿದರು.

ಕಾರ್ಯಕ್ರಮದಲ್ಲಿ ತಾ.ಕ.ಸಾ.ಪ. ಅಧ್ಯಕ್ಷರಾದ ಶರಣಬಸವ ನೀರಮಾನ್ವಿ , ಬಿವಿಆರ್ ಶಿಕ್ಷಣ ಸಂಸ್ಥೆ ಅಧ್ಯಕ್ಷ ಬಿ.ವಿ.ರೆಡ್ಡಿ, ಕಸಾಪ ಕಳಿಂಗ ಕಾಲೇಜಿನ ಆಡಳಿತಾಧಿಕಾರಿ ದತ್ತಾತ್ರೇಯ ಮೇಟಿ, ಹೆಚ್.ಶರ್ಫುದ್ದೀನ್ ಪೋತ್ನಾಳ,ಚಂದ್ರಶೇಖರ ಸುಟ್ಟಹಟ್ಟಿ, ಉಪನ್ಯಾಸಕಿ ಲಾವಣ್ಯ, ಲಕ್ಷ್ಮಣ ಜಾನೇಕಲ್, ಹನುಮಂತ ಕೊಟ್ನೆಕಲ್, ಸೈಯ್ಯದ್ ಹುಸೇನ್ ಸಾಹೇಬ್, ಡಾ.ಚನ್ನಬಸವ ಮಾಡಗಿರಿ, ಡಾ.ಬಸವರಾಜ ಸುಂಕೇಶ್ವರ ಸೇರಿದಂತೆ ಇನ್ನಿತರು ಇದ್ದರು.

## ಸಿಂಧನೂರನ್ನು ಜಿಲ್ಲೆಯನ್ನಾಗಿ ಘೋಷಿಸಲು ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ಕನ್ನಡಸೇನೆ ಧರಣಿ ಸತ್ಯಾಗ್ರಹ

**ನೈಜ್ಯ ದೆಸೆ ನ್ಯೂಸ್**

**ಸಿಂಧನೂರು: ಕರ್ನಾಟಕ ರಕ್ಷಣಾ ವೇದಿಕೆ ಕನ್ನಡಸೇನೆ (ರಿ) ವತಿಯಿಂದ ಸಿಂಧನೂರು ನಗರವನ್ನು ಪ್ರತ್ಯೇಕ ಜಿಲ್ಲೆಯನ್ನಾಗಿ ಘೋಷಿಸುವಂತೆ ಒತ್ತಾಯಿಸಿ ಸೋಮವಾರ ತಹಶೀಲ್ ಕಚೇರಿ ಮುಂಭಾಗದಲ್ಲಿ ಧರಣಿ ಸತ್ಯಾಗ್ರಹ ನಡೆಸಲಾಯಿತು.**



ಸಂಘಟನೆಯ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ತಮ್ಮ ಆಗ್ರಹವನ್ನು ವ್ಯಕ್ತಪಡಿಸಿದರು. ಸಿಂಧನೂರು ತಾಲೂಕು ವ್ಯಾಪಕ ಪ್ರದೇಶ ಹೊಂದಿದ್ದು, ಜನಸಂಖ್ಯೆ ಹಾಗೂ ಆಡಳಿತಾತ್ಮಕ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಜಿಲ್ಲೆ ಸ್ಥಾನಮಾನ ನೀಡುವುದು ಅತ್ಯವಶ್ಯಕ ಎಂದು ಪ್ರತಿಭಟನಾಕಾರರು ಹೇಳಿದರು. ಸಿಂಧನೂರು ಕೃಷಿ, ವ್ಯಾಪಾರ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ನಗರವಾಗಿದ್ದು, ಜಿಲ್ಲೆಯ ಸ್ಥಾನಮಾನ ದೊರೆತಲ್ಲಿ ಸರ್ಕಾರಿ ಕಚೇರಿಗಳು, ಆರೋಗ್ಯ ಸೇವೆಗಳು, ಶಿಕ್ಷಣ ಸಂಸ್ಥೆಗಳು ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚಿನ ಉತ್ತೇಜನ ದೊರೆಯಲಿದೆ ಎಂದು ಅವರು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ಖಆಅಅ ಬ್ಯಾಂಕ್ ನಿರ್ದೇಶಕರಾದ ಪಂಪನಗೌಡ ಬಾದರ್ಲಿ ಅವರು ಪ್ರತಿಭಟನೆಯಲ್ಲಿ ಭಾಗವಹಿಸಿ ಮಾನ್ಯ ಶಾಸಕರ ಪರವಾಗಿ ಮನವಿ ಪತ್ರವನ್ನು ಸ್ವೀಕರಿಸಿದರು. ಜನರ ದೀರ್ಘಕಾಲದ ಬೇಡಿಕೆಯನ್ನು ಸರ್ಕಾರದ ಗಮನಕ್ಕೆ ತರಲಾಗುವುದು ಎಂದು ಭರವಸೆ ನೀಡಿದರು. ಪ್ರತಿಭಟನೆಯ ವೇಳೆ ಸಂಘಟನೆಯ ಮುಖಂಡರು ಮಾತನಾಡಿ, ಸಿಂಧನೂರನ್ನು ಜಿಲ್ಲೆಯನ್ನಾಗಿ ಘೋಷಿಸುವವರೆಗೆ ಹೋರಾಟವನ್ನು ಹಂತ ಹಂತವಾಗಿ ಮುಂದುವರಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಧರಣಿಯಲ್ಲಿ ಸಂಘಟನೆಯ ವಿವಿಧ ಪದಾಧಿಕಾರಿಗಳು, ಯುವಕರು, ಮಹಿಳೆಯರು ಹಾಗೂ ಸ್ಥಳೀಯ ನಾಗರಿಕರು ಉಪಸ್ಥಿತರಿದ್ದರು.

# ಭಗವಾನ್ ಮಹಾವೀರ ಜಯಂತಿ ಅಂಗವಾಗಿ ಭಕ್ತಿಭಾವ ಹಾಗೂ ಧಾರ್ಮಿಕ ಉತ್ಸಾಹದ ನಡುವೆ ಭವ್ಯ ಮೆರವಣಿಗೆ




**ನೈಜ್ಯ ದೆಸೆ ನ್ಯೂಸ್**

**ಸಿಂಧನೂರು: ಸಿಂಧನೂರು ನಗರದಲ್ಲಿ ಭಗವಾನ್ ಮಹಾವೀರ ಜಯಂತಿ ಅಂಗವಾಗಿ ಭಕ್ತಿಭಾವ ಹಾಗೂ ಧಾರ್ಮಿಕ ಉತ್ಸಾಹದ ನಡುವೆ ಭವ್ಯ ಮೆರವಣಿಗೆ ಆಯೋಜಿಸಲಾಯಿತು.**

ನಗರದ ಪ್ರಮುಖ ರಸ್ತೆಗಳಲ್ಲಿ ಸಾಗಿದ ಈ ಮೆರವಣಿಗೆಯಲ್ಲಿ ಭಗವಾನ್ ಮಹಾವೀರರ ಭಾವಚಿತ್ರಗಳು, ಧಾರ್ಮಿಕ ಘೋಷಣೆಗಳು, ಭಜನೆಗಳು ಹಾಗೂ ಸಾಂಸ್ಕೃತಿಕ ಪ್ರದರ್ಶನಗಳು ಸಾರ್ವಜನಿಕರ ಗಮನ ಸೆಳೆದವು. ಜೈನ ಸಮುದಾಯದ ಸದಸ್ಯರು ಸೇರಿದಂತೆ ವಿವಿಧ ಧರ್ಮಗಳ ನಾಗರಿಕರು ಸಹ ಭಾಗವಹಿಸಿ ಧಾರ್ಮಿಕ ಸೌಹಾರ್ದತೆಯ ಸಂದೇಶವನ್ನು ಸಾರಿದರು. ಮಹಿಳೆಯರು, ಯುವಕರು ಹಾಗೂ ಮಕ್ಕಳು ಭಕ್ತಿಭಾವದಿಂದ ಪಾಲ್ಗೊಂಡು ಮಹಾವೀರರ ಉಪದೇಶಗಳನ್ನು ಸ್ಮರಿಸಿದರು.

ಕಾರ್ಯಕ್ರಮದ ವೇಳೆ ಸಮಾಜದಲ್ಲಿ ಶಾಂತಿ, ಅಹಿಂಸೆ, ಸಹನೆ ಹಾಗೂ ಸತ್ಯದ ಮಾರ್ಗದಲ್ಲಿ ನಡೆಯುವ ಮಹತ್ವವನ್ನು ಗಣ್ಯರು ತಿಳಿಸಿದರು. ಮೆರವಣಿಗೆಯಲ್ಲಿ ಜನಪ್ರಿಯ ನಾಯಕರು ಹಾಗೂ (KOF) ರಾಜ್ಯಾಧ್ಯಕ್ಷರು, ಮಾಜಿ ಸಚಿವರಾದ ಸನ್ಮಾನ್ಯ ಶ್ರೀ ವೆಂಕಟರಾವ್ ನಾಡಗೌಡರು, ಪಂಪನಗೌಡ ಬಾದರ್ಲಿ, ಸೋಮನಗೌಡ ಬಾದರ್ಲಿ, ಅಮರೇಶ್ ಸೇ–ರಿದಂತೆ ಹಲವಾರು ಗಣ್ಯರು ಭಾಗವಹಿಸಿ ಕಾರ್ಯಕ್ರಮಕ್ಕೆ ವಿಶೇಷ ಮೆರಗು ನೀಡಿದರು. ಭಗವಾನ್ ಮಹಾವೀರರು ಸಾರಿದ ಅಹಿಂಸೆ, ಸತ್ಯ, ತ್ಯಾಗ ಮತ್ತು ಮಾನವೀಯ ಮೌಲ್ಯಗಳು ಇಂದಿನ ಸಮಾಜಕ್ಕೆ ಅತ್ಯಂತ ಅಗತ್ಯವಾಗಿದ್ದು,

ಪ್ರತಿಯೊಬ್ಬರೂ ಅವರ ಆದ–'ರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಸಮಾಜದಲ್ಲಿ ಶಾಂತಿ ಮತ್ತು ಸೌಹಾರ್ದತೆ ಮತ್ತಷ್ಟು ಬಲವಾಗಲಿದೆ ಎಂದು ಅಭಿಪ್ರಾಯ ವ್ಯಕ್ತವಾಯಿತು. ಮೆರವಣಿಗೆಯು ಶಾಂತಿಯುತವಾಗಿ ಸಾಗಿದ್ದು, ಸಾರ್ವಜನಿಕರು ಭಕ್ತಿ ಮತ್ತು ಸಂಭ್ರಮದಿಂದ ಭಾಗವಹಿಸಿ ಮಹಾವೀರ ಜಯಂತಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಡಾ. ಪ್ರಭುಗೌಡ ಲಿಂಗದಳ್ಳಿಗೆ ಗೌರವ ಸಮರ್ಪಣೆ

**ನೈಜ್ಯ ದೆಸೆ ನ್ಯೂಸ್**

**ತಾಳಿಕೋಟಿ: ತಾಲೂಕಿನ ಕೊಡಗಾನೂರ ಗ್ರಾಮದಲ್ಲಿ ಶ್ರೀ ವೃಷಭೇಂದ್ರೇಶ್ವರ ಮಠದ ಜಾತ್ರಾ ಮಹೋತ್ಸವವು ಭಕ್ತಿ ಹಾಗೂ ಧಾರ್ಮಿಕ ಸಂಭ್ರಮದ ವಾತಾವರಣದಲ್ಲಿ ಭಾನುವಾರ ವಿಜೃಂಭಣೆಯಿಂದ ನಡೆಯಿತು.**

ಜಾತ್ರಾ ಅಂಗವಾಗಿ ಆಯೋಜಿಸಿದ್ದ ಮಹಾಸಾಧ್ವಿ ಶ್ರೀ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ಜೀವನ ದರ್ಶನ ಪ್ರವಚನ ಕಾರ್ಯಕ್ರಮದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಧಾರ್ಮಿಕ ಉಪನ್ಯಾಸವನ್ನು ಆಲಿಸಿದರು. ಈ ಸಂದರ್ಭದಲ್ಲಿ ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ದೇವರ ಹಿಪ್ಪರಗಿ ವಿಧಾನಸಭಾ ಕ್ಷೇತ್ರದ ಉಸ್ತುವಾರಿಗಳಾದ




ಡಾ. ಪ್ರಭುಗೌಡ ಲಿಂಗದಳ್ಳಿ ಅವರನ್ನು ಸಮಾಜಮುಖಿ ಸೇವೆಗಳು, ಜನಪರ ಕಾರ್ಯಗಳು ಹಾಗೂ ಧಾರ್ಮಿಕ–ಸಾಮಾಜಿ–ಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವ ಸೇವೆಯನ್ನು ಗುರುತಿಸಿ ಜಾತ್ರಾ ಉತ್ಸವ ಸಮಿತಿ ವತಿಯಿಂದ ಶಾಲು ಹೊದಿಸಿ, ಫಲಕ ನೀಡಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಕೊಡೆಕಲ್ ದುರದುಂಡೇಶ್ವರ ಮಠದ ಪರಮಪೂಜ್ಯ ಶಿವಕುಮಾರ ಮಹಾಸ್ವಾಮಿಗಳು ಸಮಾಜದಲ್ಲಿ ಧಾರ್ಮಿಕ ಮೌಲ್ಯಗಳು ಹಾಗೂ ಸೇವಾಭಾವನೆ ಹೆಚ್ಚಬೇಕು ಎಂದು ಹೇಳಿದರು. ಕೊಡಗಾನೂರಿನ ಕುಮಾರ ದೇವರು ಮಾತನಾಡಿ ಜಾತ್ರೆಗಳು ಸಮಾಜದಲ್ಲಿ ಐಕ್ಯತೆ ಹಾಗೂ ಸಂಸ್ಕೃತಿ ಉಳಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಅಭಿಪ್ರಾಯಪಟ್ಟರು. ಗ್ರಾಮದ ಗಣ್ಯರು, ಹಿರಿಯರು, ಯುವಕರು ಹಾಗೂ ಭಕ್ತರು ದೊಡ್ಡ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮಕ್ಕೆ ಮೆರುಗು ತಂದರು. ಜಾತ್ರಾ ಮಹೋತ್ಸವದ ಅಂಗವಾಗಿ ವಿವಿಧ ಧಾರ್ಮಿಕ ವಿಧಿವಿಧಾನಗಳು, ಭಜನೆ, ಪೂಜೆ ಕಾರ್ಯಕ್ರಮಗಳು ಭಕ್ತಿಭಾವದಿಂದ ನೆರವೇರಿದವು.


## ನಿಗದಿತ ಅವಧಿಯೊಳಗೆ ತೆರಿಗೆ ಪಾವತಿಸಿ, ರಿಯಾಯಿತಿ ಪಡೆಯಿರಿ: ಪಾಲಿಕೆ ಆಯುಕ್ತ ಮೊಹಪಾತ್ರ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ 2026–27ನೇ ಸಾಲಿನ ಕಂದಾಯ ಪಾವತಿಯನ್ನು ಏಪ್ರಿಲ್ 1ರಿಂದ 30ರೊಳಗಾಗಿ ತೆರಿಗೆ ಪಾವತಿ ಮಾಡಿದಲ್ಲಿ ತೆರಿಗೆ ಪಾವತಿಯ ಒಟ್ಟು ಮೊತ್ತಕ್ಕೆ ಶೇ. 5 ರಷ್ಟು ರಿಯಾಯಿತಿಯನ್ನು ಘೋಷಿಸಲಾಗಿದ್ದು, ನಿಗದಿತ ಅವಧಿಯೊಳಗೆ ಪಾವತಿ ಮಾಡಿ ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ತಿಳಿಸಿದ್ದಾರೆ.**

ಮೇ ಮತ್ತು ಜೂನ್ ಮಾಹೆಯಲ್ಲಿ ಯಾವುದೇ ರೀತಿಯ ರಿಯಾಯಿತಿ ನೀಡಲಾಗುವುದಿಲ್ಲ. ಮತ್ತು ಜುಲೈ 2026 ರಿಂದ ಒಟ್ಟು ಆಸ್ತಿ ತೆರಿಗೆಯ ಮೊತ್ತಕ್ಕೆ ಶೇಕಡ 2ರಷ್ಟು ಬಡ್ಡಿಯನ್ನು ವಿಧಿಸಲಾಗುವುದು. ನಿಗದಿತ ಅವಧಿಯಲ್ಲಿ ಪಾಲಿಕೆಗೆ ಪಾವತಿ ಮಾಡಬೇಕಾದ ಆಸ್ತಿಯ ಕಂದಾಯ ತೆರಿಗೆ, ನೀರಿನ ಶುಲ್ಕಗಳನ್ನು ಪಾವತಿ ಮಾಡುವುದರಿಂದ ನಗರದ ಸರ್ವತೋಮುಖ ಅಭಿವೃದ್ಧಿಯ ಕಾರ್ಯಗಳನ್ನು ಕೈಗೊಳ್ಳಲು ಅನುಕೂಲವಾಗುತ್ತದೆ. ಇದಕ್ಕಾಗಿ ಮಹಾನಗರ ಪಾಲಿಕೆಯ ವಲಯ ಕಚೇರಿ–1ರಲ್ಲಿ ಆಸ್ತಿ ತೆರಿಗೆ ಪಾವತಿ ಮಾಡಲು ಎರಡು ಕೌಂಟರ್‌ಗಳು ಮತ್ತು ವಲಯ ಕಚೇರಿ–02 ರಲ್ಲಿ ಒಂದು ಕೌಂಟರ್‌ನ್ನು ತೆರೆಯಲಾಗಿದ್ದು, ಈ ಕೌಂಟರ್‌ಗಳಲ್ಲಿ ತೆರಿಗೆ ಪಾವತಿ ಮಾಡಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೀರು ಶುದ್ದೀಕರಣ ಘಟಕಗಳನ್ನು ಅಕ್ರಮವಾಗಿ ನಡೆಸುತ್ತಿರುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ನಮ್ಮ ಕರವೇ ಒತ್ತಾಯ.




**ನೈಜ್ಯ ದೆಸೆ ನ್ಯೂಸ್**

**ಲಿಂಗಸಗೂರು: ಪಟ್ಟಣದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಲವಾರು ನೀರು ಶುದ್ದೀಕರಣ ಘಟಕಗಳು ಯಾವುದೇ ಸರಿಯಾದ ನಿಯಮಾವಳಿ ಹಾಗೂ ಮಾನದಂಡಗಳನ್ನು ಪಾಲಿಸದೇ ಅಕ್ರಮವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ನಮ್ಮ ಕರ್ನಾಟಕ ರಕ್ಷಣಾ ವೇದಿಕೆ (ರಿ) ತಾಲೂಕ ಅಧ್ಯಕ್ಷ ತಿಮ್ಮರೆಡ್ಡಿ ಮುನ್ನೂರು ಸಹಾಯಕ ಆಯುಕ್ತರಿಗೆ ಮನವಿಯನ್ನು ಸಲ್ಲಿಸಿ ನಂತರ ಮಾತನಾಡಿದ ಅವರು.**

ಸಾರ್ವಜನಿಕ–ರಿಗೆ ಪೂರೈಸಲಾಗುತ್ತಿರುವ ಕುಡಿಯುವ ನೀರಿನ ಗುಣಮಟ್ಟದ ಬಗ್ಗೆ ಗಂಭೀರ ಅನುಮಾನಗಳು ವ್ಯಕ್ತವಾಗುತ್ತಿವೆ. ಅನೇಕ ಘಟಕಗಳು ಅಗತ್ಯ ಪರವಾನಗಿ ಪಡೆಯದೇ ಕಾರ್ಯನಿರ್ವಹಿಸುತ್ತಿದ್ದು, ನೀರಿನ ಗುಣಮಟ್ಟ ಪರೀಕ್ಷೆ ಕೂಡ ನಿಯಮಿತವಾಗಿ ನಡೆಯುತ್ತಿಲ್ಲ. ಆರೋಗ್ಯ ಇಲಾಖೆಯ ಮಾರ್ಗಸೂಚಿಗಳು ಹಾಗೂ ಸರ್ಕಾರದ ನಿಯಮಗಳನ್ನು ಉಲ್ಲಂಘಿಸುವ ರೀತಿಯಲ್ಲಿ ಈ ಘಟಕಗಳು ಕಾರ್ಯನಿರ್ವಹಿಸುತ್ತಿರುವುದು ಆತಂಕಕಾರಿ ವಿಷಯವಾಗಿದೆ. ಇದಲ್ಲದೆ ಈ ಅಕ್ರಮ ಚಟುವಟಿಕೆಗಳ ಬಗ್ಗೆ ಪುರಸಭೆ ಮುಖ್ಯಾಧಿಕಾ–ರಿಗಳು ಕಣ್ಣುಮುಚ್ಚಿ ಕುಳಿತಿದ್ದಾರೆ. ಪರಿಶೀಲನೆ ನಡೆಸುವ ಜವಾಬ್ದಾರಿ ಹೊಂದಿರುವ ಅಧಿಕಾ–ರಿಗಳು ಯಾವುದೇ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ತೋರಿಸುತ್ತಿದ್ದಾರೆ ಎಂದು ಸಾರ್ವಜನಿಕರು ಕೂಡ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈಗಾಗಲೇ ಬೇಸಿಗೆ ಕಾಲ ಪ್ರಾರಂಭವಾಗಿದ್ದು, ಶುದ್ಧ 'ಕುಡಿಯುವ ನೀರು' ಜನರ ಮೂಲಭೂತ ಹಕ್ಕು, ಆದ–'ರೆ ಅಕ್ರಮವಾಗಿ ಕಾರ್ಯನಿರ್ವಹಿಸುವ ಘಟಕಗಳಿಂದ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇದೆ. ತಕ್ಷಣವೇ ಒಂದು ವಾರದ ಒಳಗಾಗಿ ಈ ಶುದ್ಧ ನೀರಿನ ಘಟಕಗಳ ಪರಿಶೀಲನೆ ಮಾಡಿ, ಸರ್ಕಾರದ ನಿಯಮಗಳನ್ನು ಉಲ್ಲಂಘಿಸಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಸಂಬಂಧಿಸಿದ ಪುರಸಭೆ ಮುಖ್ಯಾಧಿಕಾರಿಗೆ ಸೂಚಿಸಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ರಮೇಶ್ ಗುತ್ತೇದಾರ, ಬಸವರಾಜ್ ಕಕ್ಕೇರಿ. ಯಲಪ್ಪ, ರವಿ ಗೋರೇಬಾಳ್, ಅಶೋಕ್ ಗಸ್ತಿ, ಪ್ರವೀಣ್ ಕುಮಾರ್, ಶ್ರೀಕಾಂತ್ ರೆಡ್ಡಿ ಮುನ್ನೂರು, ಈರಣ್ಣ ರೆಡ್ಡಿ , ಶ್ರೀರಾಮ್ ಸರ್ಜಾಪುರ, ಮೌನೇಶ್ ನಾಯಕ್ ಸೇರಿದಂತೆ ಇತರರು ಇದ್ದರು.

# ಸದ್ಗುರು ಶ್ರೀ ಭೋಜಲಿಂಗೇಶ್ವರ ಮಠದಲ್ಲಿ ಸಕಲ ಸಿದ್ದತೆ ಸುಗೂರ ಶ್ರೀ ಮಠಕ್ಕೆ ತಹಶಿಲ್ದಾರರ ಭೇಟಿ

**ನೈಜ್ಯ ದೆಸೆ ನ್ಯೂಸ್**

**ಚಿತ್ತಾಪುರ: ತಾಲೂಕು ಸುಗೂರ ಎನ್ ಗ್ರಾಮದ ಪವಾಡ ಪುರುಷ ಸಚ್ಚಿದಾನಂದ ನಿತ್ಯ ನಿರಂಜನ ಮೂರ್ತಿ , ಸ್ವಯಂ ಸಿದ್ಧ ಶರಣ ಶ್ರೀ ಭೋಜಲಿಂಗೇಶ್ವರ ವಿನೂತನವಾಗಿ ನಿರ್ಮಾಣಗೊಂಡ ದೇವಸ್ಥಾನದ ಕಟ್ಟಡ ಲೋಕಾರ್ಪಣೆ ಮತ್ತು ವಿನೂತನ ಕಲ್ಯಾಣ ಮಂಟಪ ಮತ್ತು ಬೆಳ್ಳಿ ರಥೋತ್ಸವ (ಉದ್ಘಾಟನಾ) ಸಮಾರಂಭ ಕ್ಕೆ ರಾಜ್ಯದ ಮುಖ್ಯಮಂತ್ರಿಗಳಾದ ಸನ್ಮಾನ್ಯ ಶ್ರೀ ಸಿದ್ರಾಮಯ್ಯನವರು ಇದೇ ಏಪ್ರಿಲ್ 11 ರಂದು ಶ್ರೀಮಠಕ್ಕೆ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ, ಸಿದ್ಧತೆಗಳ ಕುರಿತು ಮಾನ್ಯ ತಹಶೀಲ್ದಾರರು ಶ್ರೀ ನಾಗಯ್ಯ ಹಿರೇಮಠ ಸ್ವಾಮಿಗಳು ಇಂದು ಶ್ರೀ ಭೋಜಲಿಂಗೇಶ್ವರ ಮಠದ ಪೀಠಾದಿಪತಿಗಳಾದ ಪರಮ ಪೂಜ್ಯ ಶ್ರೀ ಹಿರಗಪ್ಪ ತಾತನವರ ಜೊತೆಗೆ ಸಂಭಾಷಣೆ ನಡೆಸಿ. ಸ್ಥಳ ಪರಿಶೀಲನೆ ನಡೆಸಿದರು.**



ಈ ಭೇಟಿಯ ಪ್ರಮುಖ ಅಂಶಗಳು ಇಲ್ಲಿವೆ: ಸ್ಥಳ ಪರಿಶೀಲನೆ: ಮುಂಬರುವ ಏಪ್ರಿಲ್ 11 ರಂದು ಸಿ.ಎಮ್ ಅವರ ಅಧಿಕೃತ ಭೇಟಿಯ ಹಿನ್ನೆಲೆಯಲ್ಲಿ, ತಹಶೀಲ್ದಾರರು ಶ್ರೀಮಠದ ಆವರಣದಲ್ಲಿ ಭದ್ರತೆ, ವಾಹನ ನಿಲುಗಡೆ ಮತ್ತು ಕಾರ್ಯಕ್ರಮದ ವ್ಯವಸ್ಥೆಗಳನ್ನು ಪರಿಶೀಲಿಸಿದರು. ಅಧಿಕಾರಿಗಳಿಗೆ ಸೂಚನೆ: ಕಾರ್ಯಕ್ರಮ ಸುಸೂತ್ರವಾಗಿ ನಡೆಯಲು ಮತ್ತು ಭಕ್ತಾದಿಗಳಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಲು ಸಂಬಂಧಪಟ್ಟ ಕಂದಾಯ ಮತ್ತು ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ತಹಶೀಲ್ದಾರರು ಕಟ್ಟುನಿಟ್ಟಿನ ಸೂಚನೆ ನೀಡಿದರು. ವ್ಯವಸ್ಥೆಗಳ ಅವಲೋಕನ: ವೇದಿಕೆ ಸಿದ್ಧತೆ, ಅನೇಕ ರಾಜಕೀಯ ಗಣ್ಯರು.ಮತ್ತು ಈ ನಾಡಿನ ಅನೇಕ ಮಠಾಧೀಶರು ಆಗಮನದ ದಾರಿ ಮತ್ತು ಮಠದ ಆಡಳಿತ ಮಂಡಳಿಯೊಂದಿಗೆ ಸಮನ್ವಯದ ಕು–ರಿತು ಸಮಾಲೋಚನೆ ನಡೆಸಲಾಯಿತು.

ಈ ಸಂಧರ್ಭದಲ್ಲಿ ಕಂದಾಯ ಇಲಾಖೆಯ ಅಧಿಕಾರಿ ಹಜರತ್ (ತಲಾಟಿ) ಗ್ರಾಮ ಲೆಕ್ಕಾದಿಕಾರಿ ಮತ್ತು ರಾಮಲಿಂಗಯ್ಯ ಸ್ವಾಮಿ. ಮಹೇಶ್ ಪಾಟೀಲ ಸುಗೂರ ಎನ್, ಶರಣಗೌಡ ಬೆನಕನಹಳ್ಳಿ. ಭೀಮರೆಡ್ಡಿ ಗೌಡ ಕುರಾಳ. ವಿಶ್ವನಾಥ ರೆಡ್ಡಿ ಪಾಟೀಲ ಸುಗೂರ ಎನ್. ಸಂಗಾರೆಡ್ಡಿ ಗೌಡ ಮಾಲಿ ಪಾಟೀಲ , ಶರಣಗೌಡ ವಕೀಲರು, ಈರಣ್ಣ ಬಲಕಲ್ ಎಲ್ ಐ.ಸಿ. ಮಹಿಪಾಲ್ ರೆಡ್ಡಿ ಕರಣಗಿ. ಸಿದ್ರಾಮರೆಡ್ಡಿಗೌಡ ಬೆನಕನಹಳ್ಳಿ, ಮಲ್ಲಿಕಾರ್ಜುನ ಕಾರ್ಪೆಟರ್ ಯಾದಗಿರ. ಸುರೇಶ್ ಕೊಟಿಮನಿ ಯಾದಗಿರ, ಮಲ್ಲಪ್ಪ ಅರಿಕೇರಿ ಮಾಸ್ತರ. ಶಂಕರಗೌಡ ಮಾಸ್ತರ ಲಿಂಗಸುಗೂರ. ಡಾ.ಸುರೇಶ್ ಮಾಘನೂರ. ಮಹಾದೇವಪ್ಪ ಸಾಹುಕಾರ್ ಕುರಕುಂದಿ. ಬಸ್ಸುಗೌಡ ಮಾಲಿ ಪಾಟೀಲ್. ಸಿದ್ದುಗೌಡ ಕುರಾಳ,ಬಾಬು ಪಾಟೀಲ. ಬಸವರಾಜ ಹಡಪದ ಸುಗೂರ ಎನ್, ರಾಜೇಂದ್ರ ನಾಯ್ಕೊಡಿ,ಪ್ರಭು ಹೂಗಾರ. ಸಿದ್ದು ಸಾಹುಕಾರ್ ಕುಂಬಾರ.ಯಮನಪ್ಪ ತಳವಾರ. ಸಾಬ್ಬಣ್ಣ ಬೇನಿಗಿಡ , ಸೋಮು ಮಂಡ್ನಾಳ ಸೇರಿದಂತೆ ಸುಗೂರ ಎನ್ ಗ್ರಾಮಸ್ಥರು ಈ ಸಂಧರ್ಭದಲ್ಲಿ ಉಪಸ್ಥಿತರಿದ್ದರು ಎಂದು ಶ್ರೀಮಠದ ಸಂದ್ಭಕ್ತರಾದ ಮಲ್ಲಿಕಾರ್ಜುನ ಬಿ ಹಡಪದ ಸುಗೂರ ಎನ್ ಅವರು ಈ ಪತ್ರಿಕೆಯಲ್ಲಿ ತಿಳಿಸಿದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಮೆಕ್ಯಾನಿಕಲ್ ಮತ್ತು ಸ್ಮಾರ್ಟ್ ಮ್ಯಾನುಫ್ಯಾಕ್ಚರಿಂಗ್ ಇಂಜಿನಿಯರಿಂಗ್

ಮೆಕ್ಯಾನಿಕಲ್ ಮತ್ತು ಸ್ಮಾರ್ಟ್ ಮ್ಯಾನುಫ್ಯಾಕ್ಚರಿಂಗ್ ಇಂಜಿನಿಯರಿಂಗ ಕೋರ್ಸ್ , ಬಿ.ಟೆಕ್ ಮೆಕಾನಿಕಲ್ (ಸ್ಮಾರ್ಟ್ ಮ್ಯಾನುಫ್ಯಾಕ್ಚರಿಂಗ್) ಕಾರ್ಯಕ್ರಮವು ಉತ್ಪಾದನಾ ಶಿಕ್ಷಣಕ್ಕೆ ಬಹುಮುಖ (Multi-faceted) ದೃಷ್ಟಿಕೋನವನ್ನು ಅಳವಡಿಸಿಕೊಂಡಿದೆ. ಮೂಲ ವಿಜ್ಞಾನ ಹಾಗೂ ಇಂಜಿನಿಯರಿಂಗ್ ವಿಷಯಗಳಿಗೆ ಸಮಾನ ಮಹತ್ವ ನೀಡುವುದರ ಜೊತೆಗೆ ಘಟಕ ಉತ್ಪಾದನಾ ಪ್ರಕ್ರಿಯೆಗಳು, ಸ್ವಯಂಚಾಲಿತ ವ್ಯವಸ್ಥೆಗಳು (Automation), ಅಸೆಂಬ್ಲಿ, ಎಲೆಕ್ಟ್ರಾನಿಕ್ ಉತ್ಪಾದನೆ, ವರ್ಚುವಲ್ ಉತ್ಪಾದನೆ ಹಾಗೂ ಮಾಹಿತಿ ವ್ಯವಸ್ಥೆಗಳ ತಂತ್ರಜ್ಞಾನಗಳಿಗೂ ಒತ್ತು ನೀಡಲಾಗಿದೆ. ವಿದ್ಯಾರ್ಥಿಗಳಿಗೆ ಉತ್ಪಾದನಾ ಪ್ರಕ್ರಿಯೆಗಳು, ಉತ್ಪಾದನಾ ವ್ಯವಸ್ಥೆಗಳು, ಸಿಸ್ಟಮ್ಸ್ ಎಂಜಿನಿಯರಿಂಗ್, ಐಟಿ ನೆಟ್ವರ್ಕ್‌ಗಳು ಹಾಗೂ ಕಾರ್ಖಾನೆ ನೆಲಮಟ್ಟದ (Shop Floor) ಮೂಲ ಸಂವಹನ ವ್ಯವಸ್ಥೆಗಳ ಕುರಿತು ತರಬೇತಿ ನೀಡಲಾಗುತ್ತದೆ. ಅನುಭವಾಧಾರಿತ ಅಧ್ಯಯನ ವಿಧಾನ (Experiential Learning) ಅನುಸರಿಸಲ್ಪಡುತ್ತಿದ್ದು, ಸ್ಮಾರ್ಟ್ ಮ್ಯಾನುಫ್ಯಾಕ್ಚರಿಂಗ್‌ಗೆ ಸಂಬಂಧಿಸಿದ ವಿವಿಧ ತಂತ್ರಜ್ಞಾನ ಕ್ಷೇತ್ರಗಳಲ್ಲಿ ವಿದ್ಯಾರ್ಥಿಗಳು ಪ್ರಾಯೋಗಿಕ ಅನುಭವವನ್ನು ಪಡೆಯುತ್ತಾರೆ. ವಿದ್ಯಾರ್ಥಿಗಳು ಐದು ತಿಂಗಳ ಇಂಟರ್ನ್‌ಶಿಪ್‌ನ್ನು ಪೂರ್ಣಗೊಳಿಸಲಿದ್ದು, ಇಂದಿನ ಕೈಗಾರಿಕಾ ಕ್ಷೇತ್ರದಲ್ಲಿ ಎದುರಾಗುವ ನೈಜ ಸವಾಲುಗಳ ಬಗ್ಗೆ ನೇರ ಅನುಭವ ಪಡೆಯುತ್ತಾರೆ. ಜೊತೆಗೆ ವಾಹನೋದ್ಯಮ, ರಕ್ಷಣಾ ಕ್ಷೇತ್ರ, ಅಂತರಿಕ್ಷ ಮತ್ತು ಗ್ರಾಹಕ ವಸ್ತುಗಳ ಉತ್ಪಾದನಾ ಕೈಗಾರಿಕೆಗಳ ಸ್ಮಾರ್ಟ್ ಫ್ಯಾಕ್ಟರಿಗಳಲ್ಲಿ ಸೇವೆ ಸಲ್ಲಿಸುವ ಅವಕಾಶವೂ ವಿದ್ಯಾರ್ಥಿಗಳಿಗೆ ಲಭ್ಯವಾಗುತ್ತದೆ. ಸಾಂಪ್ರದಾಯಿಕ ಯಂತ್ರ ವಿನ್ಯಾಸವನ್ನು, ಇಂಡಸ್ಟ್ರಿ 4.0 ತಂತ್ರಜ್ಞಾನಗಳಾದ AI, IoT, ಮತ್ತು ಆಟೊಮೇಷನ್‌ನೊಂದಿಗೆ ಸಂಯೋಜಿಸುತ್ತದೆ. 4 ವರ್ಷಗಳ ಈ ಬಿ.ಇ/ಬಿ.ಟೆಕ್ ಕೋರ್ಸ್‌ನಲ್ಲಿ ರೋಬೋಟಿಕ್ಸ್, 3ಆ ಪ್ರಿಂಟಿಂಗ್, ಮತ್ತು ಡಿಜಿಟಲ್ ಉತ್ಪಾದನಾ ತಂತ್ರಗಳನ್ನು ಕಲಿಸಲಾಗುತ್ತದೆ. ಕೋರ್ಸ್ ವಿವರಗಳು (Course Details): ಕೋರ್ಸ್ ಹೆಸರು: BE/B.Tech in Mechanical and Smart Manufacturing / Mechanical Engineering (Smart Manufacturing). ಅವಧಿ: 4 ವರ್ಷಗಳು (8 ಸೆಮಿಸ್ಟರ್‌ಗಳು). ಅರ್ಹತೆ: ಪಿಯುಸಿ (PCM) ಅಥವಾ ಡಿಪ್ಲೊಮಾ. ಪ್ರಮುಖ ವಿಷಯಗಳು (Syllabus): ರೋಬೋಟಿಕ್ಸ್ ಮತ್ತು ಆಟೊಮೇಷನ್ (Robotics & Automation). ಇಂಟರ್ನೆಟ್ ಆಫ್ ಥಿಂಗ್ಸ್ (IoT) ಉತ್ಪಾದನೆಯಲ್ಲಿ (IoT in Manufacturing). CAD/CAM ಮತ್ತು ಅಓಅ ಯಂತ್ರ ನಿರ್ವಹಣೆ. ಸ್ಮಾರ್ಟ್ ಮೆಟೀರಿಯಲ್ಸ್ ಮತ್ತು ಅಡಿಟಿವ್ ಮ್ಯಾನುಫ್ಯಾಕ್ಚರಿಂಗ್ (3D Printing). ಂಋ ಮತ್ತು ಮೆಷಿನ್ ಲರ್ನಿಂಗ್ ಅವಕಾಶಗಳು (Career Opportunities): ಸ್ಮಾರ್ಟ್ ಮ್ಯಾನುಫ್ಯಾಕ್ಚರಿಂಗ್ ಇಂಜಿನಿಯರ್: ಆಧುನಿಕ ಕಾರ್ಖಾನೆಗಳಲ್ಲಿ ಆಟೊಮೇಷನ್ ನೋಡಿಕೊಳ್ಳುವುದು. ರೋಬೋಟಿಕ್ಸ್ ಪ್ರೋಗ್ರಾಮರ್: ರೋಬೋಟ್ ವಿನ್ಯಾಸ ಮತ್ತು ಪ್ರೋಗ್ರಾಮಿಂಗ್. ಅಓಅ ಆಪರೇಟರ್/ಪ್ರೋಗ್ರಾಮರ್: ವಿಸಿಎಂ (VMC) ಯಂತ್ರಗಳನ್ನು ನಿರ್ವಹಿಸುವುದು. ಅಂಆ ಡಿಸೈನರ್: ಸಾಲಿಡ್‌ವರ್ಕ್ಸ್, ಆಟೋಕ್ಯಾಡ್ (Solidworks,AutoCAD) ಬಳಸಿ ವಿನ್ಯಾಸ.

## ಹಿಂದೂ ಸಂಸ್ಕೃತಿ ರಕ್ಷಣೆ ನಮ್ಮೆಲ್ಲರ ಕರ್ತವ್ಯ: ಶಾಸಕ ಯತ್ನಾಳ

ನೈಜ್ಯ ದೆಸೆ ನ್ಯೂಸ್



**ತಾಳಿಕೋಟಿ: ಹಿಂದೂ ಸನಾತನ ಧರ್ಮದ ಸಂಸ್ಕೃತಿ ಇಡೀ ಜಗತ್ತಿಗೆ ಮಾದರಿಯಾಗಿದೆ. ಅದರ ರಕ್ಷಣೆ ನಮ್ಮೆಲ್ಲರ ಕರ್ತವ್ಯವಾಗಿದ್ದು ಇದಕ್ಕಾಗಿ ನಾವೆಲ್ಲರೂ ಒಂದಾಗುವ ಅಗತ್ಯ ಇದೆ ಎಂದು ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿದರು. ಪಟ್ಟಣದ ಮಹಾರಾಣಾ ಪ್ರತಾಪ್ ಸಿಂಹ ವೃತದಲ್ಲಿ ಶ್ರೀ ರಾಮನವಮಿ ಉತ್ಸವ ಸಮಿತಿ(ರಿ) ಇವರ ವತಿಯಿಂದ ಹಮ್ಮಿಕೊಂಡ 2ನೇ ವರ್ಷದ ಶ್ರೀರಾಮ ನವಮಿ ಉತ್ಸವವನ್ನು ಉದ್ಘಾಟಿಸಿ ಸೋಮವಾರ ಸಂಜೆ ಅವರು ಮಾತನಾಡಿದರು.**

ಹಿಂದೂ ಧರ್ಮದಲ್ಲಿ ಇನ್ನೂ ಜೀವಂತವಾಗಿರುವ ಅಸ್ಪೃಶ್ಯತೆ ಹಾಗೂ ಜಾತಿ ವ್ಯವಸ್ಥೆಯಿಂದಾಗಿ ನಾವು ದುರ್ಬಲರಾಗುತ್ತಿದ್ದೇವೆ ನಾವು ಹಿಂದೂಗಳು ನಾವೆಲ್ಲರೂ ಒಂದು ಎಂಬ ಭಾವನೆ ಎಲ್ಲರಲ್ಲೂ ಬರಬೇಕಾಗಿದೆ ನಮ್ಮಲ್ಲಿರುವ ವ್ಯತ್ಯಾಸಗಳನ್ನು ಮರೆತು ಹಿಂದುತ್ವದ ರಕ್ಷಣೆಗಾಗಿ ಒಗ್ಗಟ್ಟಿನಿಂದ ಕೆಲಸ ಮಾಡಬೇಕಾಗಿದೆ, ರಾಮಾಯಣ ಮಹಾಭಾರತ ಹಾಗೂ ಡಾ.ಬಾಬಾ ಸಾಹೇಬರು ರಚಿಸಿದ ಸಂವಿಧಾನ ನಮಗೆ ಶ್ರೇಷ್ಠ ಗ್ರಂಥಗಳಾಗಿವೆ. ಹಿಂದೂ ಸನಾತನ ಧರ್ಮ ಅಳಿಸಲು ಯಾರಿಂದಲೂ ಸಾಧ್ಯವಿಲ್ಲ ಎಂದು ತಿಳಿಸಿದ ಅವರು ಶ್ರೀ ರಾಮನವಮಿ ಉತ್ಸವ ಸಮಿತಿಯ ಯುವಕರು ಧರ್ಮರಕ್ಷಣೆಯ ಕಾರ್ಯವನ್ನು ಮಾಡುತ್ತಿದ್ದಾರೆ ಅವರಿಗೆ ಎಲ್ಲರೂ ಸಹಕಾರ ನೀಡಬೇಕು ಎಂದರು.

ಬಿಜೆಪಿ ಮಾಜಿ ಜಿಲ್ಲಾ ಅಧ್ಯಕ್ಷ ಆರ್. ಎಸ್.ಪಾಟೀಲ (ಕೂಚಬಾಳ) ಪ್ರಾಸ್ತಾವಿಕವಾಗಿ ಮಾತನಾಡಿ ರಾಮ ನವಮಿ ಉತ್ಸವ ಸಮಿತಿ ಪದಾಧಿಕಾರಿಗಳ ಧರ್ಮ ಸೇವೆಯನ್ನು ಶ್ಲಾಘಿಸಿದರು. ತಾಳಿಕೋಟಿ ಖಾಸ್ಗತೇಶ್ವರ ಮಠದ ಪೂಜ್ಯ ಸಿದ್ದಲಿಂಗ ದೇವರು, ಗುಂಡಕನಾಳ ಬ್ರಹನ್ಮಠದ ಷ.ಬ್ರ. ಶ್ರೀ ಗುರುಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು,ಕೆಸರಟ್ಟಿ ಶಂಕರಲಿಂಗ ಮಠದ ಪೂಜ್ಯ ಸೋಮಲಿಂಗ ಸ್ವಾಮಿಗಳು ಹಾಗೂ ವೇ.ಮೂ.ವೆಂಕಟೇಶಾಚಾರ್ಯರು ಪಾವನ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಪುರಸಭೆ ಮಾಜಿ ಅಧ್ಯಕ್ಷ ದಶರಥ ಸಿಂಗ್ ಎನ್.ಮನಗೂಳಿ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಜಿ.ಪಂ. ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ, ಪುರಸಭೆ ಮಾಜಿ ಸದಸ್ಯ ಸುರೇಶ ಹಜೇರಿ, ಶ್ರೀ ರಾಮನವಮಿ ಉತ್ಸವ ಸಮಿತಿ ಅಧ್ಯಕ್ಷ ಅಮಿತಸಿಂಗ್ ಡಿ.ಮನಗೂಳಿ,ಉಪಾಧ್ಯಕ್ಷ ಸೂರಜ ಹಜೇರಿ, ಹರಿಸಿಂಗ್ ಮೂಲಿಮನಿ, ಮಾನಸಿಂಗ್ ಕೊಕಟನೂರ,ಬಾಬು ಹಜೇರಿ, ಗೋವಿಂದಸಿಂಗ್ ಮೂಲಿಮನಿ,ರತನಸಿಂಗ್ ಕೊಕಟನೂರ, ರಾಜು ಹಂಚಾಟೆ,ಡಿ.ಕೆ.ಪಾಟೀಲ, ಪ್ರಭು ಬಿಳೆಭಾವಿ, ಪರಶುರಾಮ ಎಂ.ಕಟ್ಟಿಮನಿ, ರಾಜು ಸೊಂಡೂರ,ಭಂಡು ಧಾಯಪುಲೆ, ನಾಗೇಶ ಕಟ್ಟಿಮನಿ, ರಾಮಣ್ಣ ಕಟ್ಟಿಮನಿ,ಸಂಜೀವಪ್ಪ ಬರದೇನಾಳ, ಶ್ರೀರಾಮ ನವಮಿ ಉತ್ಸವ ಸಮಿತಿ ಪದಾಧಿಕಾರಿಗಳಾದ ಗೋವಿಂದಸಿಂಗ್ ಹಜೇರಿ,ಸುಧೀರ ತಿವಾರಿ, ರಾಘು ಹಜೇರಿ, ವಿಠಲಸಿಂಗ್ ಹಜೇರಿ, ನಿತಿನ್ ವಿಜಾಪೂರ, ರಾಜು ಹಜೇರಿ, ಚಂದ್ರು ರಜಪೂತ, ಸರ್ವ ಸಮಾಜದ ಗಣ್ಯರು,ಮುಖಂಡರು,ಅಪಾರ ಸಂಖ್ಯೆಯಲ್ಲಿ ಯುವಕರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

## ಡಾ.ಬಾಬು ಜಗಜೀವನ್ ರಾಮ್ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಣೆ ಪೂರ್ವಭಾವಿಸಭೆ

ನೈಜ್ಯ ದೆಸೆ ನ್ಯೂಸ್




**ಮಾನ್ವಿ: ಪಟ್ಟಣದ ತಹಶೀಲ್ದಾರ್ ಕಚೇರಿಯ ಸಭಾಂಗಣದಲ್ಲಿ ನಡೆದ ವಿವಿಧ ಮಹಾನಿಯರ ಜಯಂತಿಗಳ ಆಚರಣೆಯ ಪೂರ್ವಭಾವಿ ಸಭೆಯಲ್ಲಿ ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಮಾತನಾಡಿ ತಾಲೂಕು ಆಡಳಿತ, ತಾಲೂಕು ಸಮಾಜ ಕಲ್ಯಾಣ ಇಲಾಖೆ ಹಾಗೂ ವಿವಿಧ ಸಮುದಾಯಗಳ ಸಹಭಾಗಿತ್ವದಲ್ಲಿ ಏ.5 ರಂದು ಡಾ.ಬಾಬು ಜಗಜೀವನ್ ರಾಮ್ ಜಯಂತಿ ಹಾಗೂ ಏ.14 ರಂದು ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರ ಜಯಂತಿಯನ್ನು ಶಾಸಕ ಹಂಪಯ್ಯನಾಯಕರವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದ್ದು ಪಟ್ಟಣದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಡಾ.ಬಾಬು ಜಗಜೀವನ್ ರಾಮ್ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಪಟ್ಟಣದ ಪ್ರಮುಖ ಬೀದಿಗಳ ಮೂಲಕ ತಹಶೀಲ್ದಾರ್ ಕಚೇರಿಯ ಆವರಣದಲ್ಲಿನ ವೇದಿಕೆಯವರೆಗೆ ವಿವಿಧ ಜನಪದ ಕಲಾ ತಂಡಗಳೊಂದಿಗೆ ಮೆರವಣಿಗೆ ನಡೆಸಲಾಗುವುದು.**

ನಂತರ ವೇದಿಕೆಯಲ್ಲಿ ಡಾ.ಬಾಬು ಜಗಜೀವನ್ ರಾಮ್ ರವರ ಕುರಿತು ಹಿರಿಯ ವಕೀಲರಾದ ಯಲ್ಲಪ್ಪ ಬಾದರದಿನ್ನಿ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ರವರ ಜೀವನ ಹಾಗೂ ಸಾಧನೆ ಕುರಿತು ತಾಯಪ್ಪ ಬಿ,ಹೋಸೂರು ರವರಿಂದ ಉಪನ್ಯಾಸ ಹಾಗೂ ಸಮುದಾಯಗಳ ಸಾಧಕರಿಗೆ ತಾಲೂಕಾಡಳಿತ ವತಿಯಿಂಸ ಸನ್ಮಾನ , ಮಕ್ಕಳಿಂದ ಸಾಂಸ್ಕೃತಿ ಕಾರ್ಯಕ್ರಮ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಅಯೋಜಿಸಲಾಗಿದ್ದು ತಾಲೂಕು ಮಟ್ಟದಲ್ಲಿನ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಏ.5 ರಂದು ಡಾ.ಬಾಬು ಜಗಜೀವನ್ ರಾಮ್ ಜಯಂತಿ ಹಾಗೂ ಏ.14 ರಂದು ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರ ಜಯಂತಿಯನ್ನು ಆಚರಿಸಿ ನಂತರ ತಾಲೂಕು ಆಡಳಿತ ವತಿಯಿಂದ ನಡೆಯುವ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಸೂಚಿಸಿದರು.

ದಲಿತ ಪರ ಹೋರಾಟಗಾರರಾದ ಪರಶುರಾಮ ಕುರ್ಡಿ ಮಾತನಾಡಿ ಮಾನ್ವಿಯಲ್ಲಿ ಇದುವರೆಗೂ ಕೂಡ ಡಾ.ಬಾಬು ಜಗಜೀವನ್ ರಾಮ್ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ರವರ ಭವನ ನಿರ್ಮಾಣ ಮಾಡದೆ ಇರುವುದರಿಂದ ಸಾರ್ವಜನಿಕರಿಗೆ ತಮ್ಮ ಕಾರ್ಯಕ್ರಮಗಳನ್ನು ಮಾಡುವುದಕ್ಕೆ ಅಗುತ್ತಿಲ್ಲ ಅದ್ದರಿಂದ ಕೂಡಲೆ ಭವನಗಳ ನಿರ್ಮಾಣಕ್ಕೆ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು. ದತ್ತಾತ್ರೇಯ ವಕೀಲರು ಮಾತನಾಡಿ ಚತುಷ್ಪಥ ರಸ್ತೆ ನಿರ್ಮಾಣ ಸಂಸ್ಥೆಯವರು ಮುಖ್ಯ ರಸ್ತೆಯಲ್ಲಿ ಬರುವ ಗ್ರಾಮಗಳಲ್ಲಿನ ಡಾ.ಬಿ.ಆರ್.ಅಂಬೇಡ್ಕರ್ ವೃತ್ತಗಳಲ್ಲಿನ ಭಾವಚಿತ್ರಗಳನ್ನು ಸ್ಥಳಾಂತರಿಸಿದು ಇದುವರೆಗೂ ಕೂಡ ಪುನಃ ಭಾವಚಿತ್ರಗಳನ್ನು ಅಳವಡಿಸಿಲ್ಲದೆ ಇರುವುದರಿಂದ ಜಯಂತಿಗಳನ್ನು ಆಚರಿಸುವುದಕ್ಕೆ ಸಾಧ್ಯವಾಗದೆ ಇರುವುದರಿಂದ ಕೂಡಲೆ ಭಾವಚಿತ್ರಗಳನ್ನು ಅಳವಡಿಸುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳ ಬೇಕು ಎಂದು ಒತ್ತಾಯಿಸಿದರು.

ಪೂರ್ವಭಾವಿ ಸಭೆಯಲ್ಲಿ ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಸೈರಾಬಾನು ಮಾತನಾಡಿದರು. ತಾಲೂಕು ಪಂಚಾಯಿತಿ ಇ.ಓ. ಖಾಲಿದ್ ಅಹ್ಮದ್, ತಾ.ಅರೋಗ್ಯಧಿಕಾರಿ ಡಾ.ಶರಣಬಸವರಾಜು, ಪಿ.ಐ.ಸೋಮಶೇಖರ ಎಸ್. ಕೆಂಚರೆಡ್ಡಿ, ಪ.ಪಂಗಡ ಕಲ್ಯಾಣಾಧಿಕಾರಿ ಮಹಾಲಿಂಗಪ್ಪ ಇಂಗಳದಾಳ್, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಭಾಗಯ್ಯನಾಯಕ, ಹಿರಿಯ ದಲಿತ ಮುಖಂಡರಾದ ಹನುಮಂತಕೋಟೆ, ಶಿವರಾಜ ಉಮಳಿ ಹೊಸೂರು,ಬಸವರಾಜ ನಕ್ಕುಂದಿ, ಕಾಶಿನಾಥ ಕುರ್ಡಿ, ಬುಡ್ಡಪ್ಪನಾಯಕ, ಪಿ.ರವಿಕುಮಾರ,ಸುಂದರ್, ಸೇರಿದಂತೆ ಇನ್ನಿತರರು ಇದ್ದರು.

## ಸಿರವಾರ: ಏಪ್ರಿಲ್ 6ರಂದು ಮಾರುಕಟ್ಟೆ ಬಹಿರಂಗ ಹರಾಜು

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯ ಸಿರವಾರ ಪಟ್ಟಣ ಪಂಚಾಯತಿ ವತಿಯಿಂದ 2026–27ನೇ ಸಾಲಿನ ಅವಧಿಗೆ ಮಾರುಕಟ್ಟೆ ಬಹಿರಂಗ ಹರಾಜು ಹಮ್ಮಿಕೊಳ್ಳಲಾಗಿದ್ದು, ಆಸಕ್ತರು ಏಪ್ರಿಲ್ 6ರ ಬೆಳಿಗ್ಗೆ 11ಗಂಟೆಗೆ ನೂತನ ಪಟ್ಟಣ ಪಂಚಾಯತ್ ಕಾರ್ಯಾಲಯದಲ್ಲಿ ಭಾಗವಹಿಸಬಹುದಾಗಿದೆ ಎಂದು ಕೋರಲಾಗಿದೆ.**

ಆಸಕ್ತಿಯುಳ್ಳವರು ಷರತ್ತುಗಳಿಗೆ ಒಳಪಟ್ಟು ವಾರದ ಮಾರುಕಟ್ಟೆಗೆ 50 ಸಾವಿರ ಠೇವಣಿ ಹಾಗೂ ದಿನದ ಮಾರುಕಟ್ಟೆಗೆ 25 ಸಾವಿರ ಠೇವಣಿ ಪಾವತಿಸಬೇಕು. ಠೇವಣಿ ಹಣವನ್ನು ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ ಸಿರವಾರ ಇವರಿಗೆ ಬ್ಯಾಂಕ್ ಮೂಲಕ ಡಿಡಿ ಪಾವತಿಸಿ ಅಥವಾ ನಗದು ರೂಪದಲ್ಲಿ ಸಲ್ಲಿಸಿ ಹರಾಜಿನಲ್ಲಿ ಭಾಗವಹಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಿರವಾರ ಪಟ್ಟಣ ಪಂಚಾಯತಿಯನ್ನು ಕಚೇರಿಯ ಸಮಯದಲ್ಲಿ ಭೇಟಿ ನೀಡಿ, ಮಾಹಿತಿ ಪಡೆಯಬಹುದಾಗಿದೆ ಎಂದು ರವಾರ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಳಗಾನೂರು ಬಜೆಟ್ ಬ್ಯಾಲೆನ್ಸ್ ಗೇಮ್, ಬಂಡವಾಳ ಹೂಡಿಕೆ ಬೂಮ್! ಮಾರ್ಚ್ ಆಯವ್ಯಯ ಸಭೆ ಯಶಸ್ವಿ

ನೈಜ್ಯ ದೆಸೆ ನ್ಯೂಸ್



**ಬಳಗಾನೂರು: ಪಟ್ಟಣದ ಅಭಿವೃದ್ಧಿಯ ಭವಿಷ್ಯಕ್ಕೆ ದಿಕ್ಕು ತೋರಿಸುವ 2026–27ನೇ ಸಾಲಿನ ಆಯವ್ಯಯವನ್ನು ಬಳಗಾನೂರು ಪಟ್ಟಣ ಪಂಚಾಯ್ತಿಯ ಅಧ್ಯಕ್ಷ ಶಿವಕುಮಾರ ನಾಯಕ ಮಂಗಳವಾರ ಮಂಡಿಸಿದ್ದಾರೆ. ಈ ಬಜೆಟ್ ಪಟ್ಟಣದ ಆರ್ಥಿಕ ಸ್ಥಿತಿಗತಿಗಳನ್ನು ಮಾತ್ರವಲ್ಲ,ಮುಂದಿನ ವರ್ಷದ ಕಾರ್ಯಯೋಜನೆಗೆ ಒಂದು ನಕ್ಷೆಯಂತಿದೆ. ಆಯವ್ಯಯದ ಪ್ರಕಾರ, ವರ್ಷದ ಆರಂಭದಲ್ಲಿ ಪಂಚಾಯ್ತಿಗೆ 66,38,522 ನಗದು ಮತ್ತು ಬ್ಯಾಂಕ್ ಶಿಲ್ಕು ಲಭ್ಯವಿದೆ. ಇದು ಹಿಂದಿನ ವರ್ಷದ ಆರ್ಥಿಕ ಸ್ಥಿರತೆಯನ್ನು ಸೂಚಿಸುತ್ತದೆ.**

ಪಂಚಾಯ್ತಿಯ ಒಟ್ಟು ಸ್ವೀಕೃತಿಗಳು ?19,01,74,000 ಎಂದು ಅಂದಾಜಿಸಲಾಗಿದೆ. ಇದರಲ್ಲಿ: ರಾಜಸ್ವ ಸ್ವೀಕೃತಿಗಳು: 2,85,46,000 ಬಂಡವಾಳ ಸ್ವೀಕೃತಿಗಳು: 7,75,00,000 ಅಸಾಧಾರಣ ಸ್ವೀಕೃತಿಗಳು:8,41,28,000 ಈ ಅಂಕಿ–ಅಂಶಗಳು ಸರ್ಕಾರದ ಅನುದಾನಗಳು ಹಾಗೂ ವಿಶೇಷ ಯೋಜನೆಗಳಿಂದ ಹೆಚ್ಚಿನ ಆದಾಯ ನಿರೀಕ್ಷೆಯಿರುವುದನ್ನು ತೋರಿಸುತ್ತವೆ. ಒಟ್ಟು ಪಾವತಿಗಳು 19,22,72,000 ಆಗಿದ್ದು, ಖರ್ಚು ಭಾಗದಲ್ಲಿ:ರಾಜಸ್ವ ಪಾವತಿಗಳು: 2,74,80,000 ಬಂಡವಾಳ ಪಾವತಿಗಳು: 7,81,50,000 ಅಸಾಧಾರಣ ಪಾವತಿಗಳು8,66,42,000 ಇವು ಮೂಲಸೌಕರ್ಯ ಅಭಿವೃದ್ಧಿ, ಯೋಜನೆಗಳ ಅನುಷ್ಠಾನ ಹಾಗೂ ಅನಿವಾರ್ಯ ವೆಚ್ಚಗಳಿಗೆ ಮೀಸಲಾದಂತಿವೆ.

ಅಂತಿಮವಾಗಿ,ಆದಾಯಕ್ಕಿಂತ ಖರ್ಚು ಸ್ವಲ್ಪ ಹೆಚ್ಚಿರುವ ಹಿನ್ನೆಲೆಯಲ್ಲಿ, ವರ್ಷದ ಕೊನೆಯಲ್ಲಿ ಪಂಚಾಯ್ತಿಗೆ 45,40,522 ಶಿಲ್ಕು ಉಳಿಯಲಿದೆ ಎಂದು ಅಂದಾಜಿಸಲಾಗಿದೆ. ಇದು ಆರ್ಥಿಕ ಸಮತೋಲನ ಕಾಪಾಡಿಕೊಳ್ಳುವಲ್ಲಿ ಪಂಚಾಯ್ತಿಗೆ ಸಣ್ಣ ಸವಾಲು ಎದುರಾಗಬಹುದು ಎಂಬ ಸೂಚನೆ ನೀಡುತ್ತದೆ. ಒಟ್ಟಾರೆ, ಈ ಆಯವ್ಯಯವು ಬಳಗಾನೂರು ಪಟ್ಟಣದ ಅಭಿವೃದ್ಧಿಗೆ ಪ್ರಾಮುಖ್ಯತೆ ನೀಡಿದರೂ,ಖರ್ಚಿನ ಪ್ರಮಾಣ ಹೆಚ್ಚಿರುವುದರಿಂದ ಹಣಕಾಸು ನಿರ್ವಹಣೆಯಲ್ಲಿ ಜಾಗ್ರತೆ ಅಗತ್ಯವಿದೆ. ಸಮರ್ಪಕ ಯೋಜನೆ ಹಾಗೂ ಅನುಷ್ಠಾನದ ಮೂಲಕ ಪಟ್ಟಣದ ಅಭಿವೃದ್ಧಿಯನ್ನು ವೇಗಗೊಳಿಸುವ ನಂಬಿಕೆ ವ್ಯಕ್ತವಾಗಿದೆ. "ಸಂಖ್ಯೆಗಳು ಮಾತ್ರವಲ್ಲ, ಅಭಿವೃದ್ಧಿಯ ಕನಸುಗಳಿಗೂ ಇದು ಒಂದು ರೂಪುರೇಷೆ" ಯಂತಿದೆ.

ಈ ವಿಶೇಷ ಸಭೆಯಲ್ಲಿ ಸರ್ವ ಸದಸ್ಯರೂ ಹಾಜರಿದ್ದು ತಮ್ಮ ಮುನ್ನೋಟ,ಇದುವರೆಗಿನ ಕಾರ್ಯವೈಖರಿಯ ಹಿನ್ನೋಟದ ಬಗ್ಗೆ ಅವಲೋಕನ ಮಾಡಿದರು.ಸದಸ್ಯರು ಕೇಳಿದ ಕೆಲವು ಪ್ರಶ್ನೆಗಳಿಗೆ ಉತ್ತರ ಸಿಕ್ಕವು, ಇನ್ನು ಕೆಲವು ಪ್ರಶ್ನೆಗಳಿಗೆ ಬರವಸೆ,ಮತ್ತು ಕೆಲವಕ್ಕೆ ಮೌನಸಿಕ್ಕಿತು,ವರ್ಷವಾದರೂ ಉದ್ಘಾಟನೆ ಕಾಣದ ಮೂತ್ರಾಲಯ ಶೌಚಾಲಯಗಳಿಗೆ ಉದ್ಘಾಟನಾಭಾಗ್ಯಕ್ಕಾಗಿ ಆಗ್ರಹಿಸಿದರು,ಬೀದಿಬದಿ ವ್ಯಾಪಾರಿಗಳ ಕುರಿರಗಳು ನೆಲಸಮವಾಗಿ ವರ್ಷಕಳೆದರೂ ಮೇಲೇಳದಮಳಿಗೆಗಳಬಗ್ಗೆ,ಅಧ್ಯಕ್ಷ, ಉಪಾಧ್ಯಕ್ಷ,ಸದಸ್ಯರುಗಳ ಗೌರವಧನದ ಪರಿಷ್ಕರಣೆಯ ಬಗ್ಗೆ,ಆಸ್ತಿ ತೆರಿಗೆ,ನೀರಿನ ತೆರಿಗೆಗಳ ಪರಿಷ್ಕರಣೆಯ ಬಗ್ಗೆ ತೀವ್ರ ಚರ್ಚೆ ನಡೆಯಿತು.ಎರಡು ಬಾರಿ ಮುಂದೂಡಲ್ಪಟ್ಟು ತೀವ್ರ ಕುತೋಹಲ ಕೆರಳಿಸಿದ್ದ ಮಾರ್ಚ್ ಆಯವ್ಯಯ ಸಭೆ ಅಂತು ಇಂತೂ ಮಂಗಳವಾರ ಯಶಸ್ವಿಯಾಗಿ ನಡೆಯುವ ಮೂಲಕ ಕುತೋಹಲಕ್ಕೆ ತೆರೆ ಎಳೆಯಿತು.

## ಭಗವಾನ್ ಮಹಾವೀರರ ಶಾಂತಿ, ಸೌಹಾರ್ಧತೆ ಸಂದೇಶಗಳು ಇಂದಿಗೂ ಪ್ರಸ್ತುತ: ಡಾ.ಹಂಪಣ್ಣ ಸಜ್ಜನ್

ನೈಜ್ಯ ದೆಸೆ ನ್ಯೂಸ್



**ರಾಯಚೂರು: ಭಗವಾನ್ ಮಹಾವೀರರು ತಮ್ಮ ಜೀವಿತಾವಧಿಯಲ್ಲಿ ಪರಿಪಾಲನೆ ಮಾಡಿದ ಮತ್ತು ಇಡೀ ಜಗತ್ತಿಗೆ ತಿಳಿಸಿಕೊಟ್ಟ ಶಾಂತಿ, ಸೌಹಾರ್ಧತೆ ಮತ್ತು ಸಹೋದರತೆ ಸಂದೇಶಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್ ಅವರು ಹೇಳಿದರು.**

ಮಾರ್ಚ್ 31ರ ಮಂಗಳವಾರ ದಂದು ನಗರದ ಸುಮತಿನಾಥ ಜೈನ ಶ್ವೇತಾಂಬರ ಮೂರ್ತಿ ಪೂಜಕ ಆರಾಧನಾ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನಡೆದ ಭಗವಾನ್ ಶ್ರೀ ಮಹಾವೀರ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಅಹಿಂಸಾ ತತ್ವ ಪ್ರತಿಪಾದಿಸಿದ ಮಹಾವೀರರು ಸೇರಿದಂತೆ ಅನೇಕ ಮಹನೀಯರು ಸಮಾಜಕ್ಕೆ ತಮ್ಮದೇ ಆದ ಕೊಡುಗೆ ಮತ್ತು ಜೀವನ ಸಂದೇಶ ನೀಡಿದ್ದಾರೆ. ಅಂತಹ ಮಹನೀಯರ ಜಯಂತಿಗಳು ಕೇವಲ ಆಚರಣೆಗಳಿಗೆ ಮಾತ್ರ ಸೀಮಿತವಾಗದೇ, ಅವರ ತತ್ವಾದರ್ಶಗಳು ಜೀವನದಲ್ಲಿ ಅಳವಡಿಸಿಕೊಂಡಾಗ ಮಹನೀಯರಿಗೆ ಗೌರವ ಸಲ್ಲಿಸಿದಂತಾಗುತ್ತದೆ ಎಂದು ಹೇಳಿದರು.

ಈ ವೇಳೆ ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಕುಮಾರಸ್ವಾಮಿ ಅವರು ಮಾತನಾಡಿ, ಕರುಣೆ, ಅಹಿಂಸೆ, ಸಮಾನತೆ ಸೇರಿದಂತೆ ಭಗವಾನ್ ಮಹಾವೀರರು ಬೋಧನೆ ಮಾಡಿದ ಅಂಶಗಳನ್ನು ಜೀವನದಲ್ಲಿ ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕು. ನಾವು ಬದುಕಬೇಕು, ಬೇರೆಯವರನ್ನು ಬದುಕಲು ಬಿಡಬೇಕೆಂಬುದನ್ನು ಪ್ರತಿಯೊಬ್ಬರೂ ಪಾಲಿಸಬೇಕು. ಮಹಾವೀರರು ತಿಳಿಸಿದ ಸಂದೇಶಗಳು ಕೇವಲ ಜೈನ ಧರ್ಮಕ್ಕೆ ಮಾತ್ರ ಸೀಮಿತವಲ್ಲ; ಅವರ ಸಂದೇಶಗಳಿಂದ ಇಡೀ ಮನುಕುಲದ ಉದ್ಧಾರವಾಗುತ್ತದೆ ಎಂದರು. ಈ ವೇಳೆ ಉಪನ್ಯಾಸಕರಾಗಿ ರಾಯಚೂರಿನ ಪ್ರೇಮಲತಾ ಅವರು ಮಾತನಾಡಿ, ಜಗತ್ತಿನ ಜನರು ಅನುಭವಿಸುತ್ತಿದ್ದ ಅನೇಕ ತೊಂದರೆಗಳಿಗೆ ಪರಿಹಾರ ನೀಡಿದ ಅನೇಕ ಮಹನೀಯರಲ್ಲಿ ಮಹಾವೀರರು ಕೂಡ ಒಬ್ಬರಾಗಿದ್ದಾರೆ.

ಜಗತ್ತನ್ನು ಉತ್ತಮ ರೀತಿಯಲ್ಲಿ ಕೊಂಡೊಯ್ಯಲು ತಮ್ಮ ಬದುಕನ್ನೇ ಮುಡುಪಾಗಿಟ್ಟಿದ್ದಾರೆ. ಜೊತೆಗೆ ಧಾರ್ಮಿಕ ಕ್ರಾಂತಿಯನ್ನು ಮೂಡಿಸಿದವರಲ್ಲಿ ಭಗವಾನ್ ಮಹಾವೀರರು ಕೂಡ ಒಬ್ಬರಾಗಿದ್ದಾರೆ ಎಂದು ಹೇಳಿದರು.

ಜಿಲ್ಲಾಧಿಕಾರಿಗಳಿಂದ ಮೆರವಣಿಗೆ ಚಾಲನೆ: ಭಗವಾನ್ ಮಹಾವೀರ ಭಾವಚಿತ್ರ ಮೆರವಣಿಗೆಗೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಚಾಲನೆ ನೀಡಿದರು. ಜೈನ್ ಭವನದಿಂದ ಆರಂಭವಾದ ಮೆರವಣಿಗೆಯಲ್ಲಿ ಸಮಾಜದ ನೂರಾರು ಜನತೆ ಪಾಲ್ಗೊಂಡು ಶಾಂತಿ, ಸಹಿಷ್ಣುತೆ ಹಾಗೂ ಅಹಿಂಸೆಯ ಸಂದೇಶ ಸಾರಿದರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರ ಸ್ವಾಮಿ, ರಾಯಚೂರು ತಹಶೀಲ್ದಾರ್ ಸುರೇಶ ವರ್ಮ, ರಾಯಚೂರು ಮಹಾನಗರ ಪಾಲಿಕೆ ಸಮಿತಿ ಕಾರ್ಯದರ್ಶಿ ಕೃಷ್ಣಾ ಶಾವಂತಗೇರಾ, ಸಮಾಜದ ಪ್ರಮುಖರಾದ ಪ್ರಕಾಶ, ಕಿಶೋರ್, ಮಹಾವೀರ ಹರದರ, ಪ್ರಖರಾಜ, ಅಶ್ವಿನ ಭಾಟಿಯಾ, ಮೋಹನಲಾಲ್, ರಂಜಿತ್ ಕಟಾರಿಯಾ, ರಾಜುಭಾಯಿ ದೇಸಾಯಿ, ಮನ್ನೂಬಾಯಿ, ಅಶೀಕ ಲೋಧ್ರಾ ಸೇರಿದಂತೆ ಇತರರು ಇದ್ದರು. ದಂಡಪ್ಪ ಬಿರಾದಾರ್ ನಿರೂಪಿಸಿದರು. ಅಶೋಕ ಕುಮಾರ್ ಜೈನ್ ವಂದಿಸಿದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101 KARNATAKA, EDITOR BY: IRFAN K PH NO.